# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 229 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 30–03–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 229 | Title- Code: KARKAN 28269 | Chitradurga | Date: 030-03-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಸ್ತ್ರೀಯರಿಗೆ ರಾಜಕೀಯ ಮೀಸಲಾತಿ ನೀಡಿದ್ದು ಮೋದಿ: ಗಾಯತ್ರಿ 2
ಚುನಾವಣಾ ಆಯೋಗದ ನಿರ್ದೇಶನದಂತೆ ಕಾರ್ಯನಿರ್ವಹಿಸಲು ಸೂಚನೆ 3
ಚೆಕ್ ಪೋಸ್ಟ್ ಸಿಬ್ಬಂದಿಗಳಿಗೆ ಬೇಕು ಮೊಬೈಲ್ ಟಾಯ್ಲೆಟ್ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಬಂಡಾಯದ ಮುನ್ಸೂಚನೆ ನೀಡಿದ ಸ್ವಾಭಿಮಾನಿ ಕಾರ್ಯಕರ್ತರ ಸಭೆ

**ಮಾಜಿ ಸಿಎಂ ಯಡಿಯೂರಪ್ಪ ವಿರುದ್ಧ ಕಿಡಿಕಾರಿದ ಶಾಸಕ ಎಂ.ಚಂದ್ರಪ್ಪ –ನಿಮ್ಮ ಜತೆ ನಾವಿದ್ದೇವೆ ಎಂದ ಬೆಂಬಲಿಗರು**






» ಚಿತ್ರದುರ್ಗ

ನನ್ನ ಮಗ ಏನು ತಪ್ಪು ಮಾಡಿದ್ದಾ ಅಂತ ಈ ಬಾರಿಯ ಪಾರ್ಲಿಮೆಂಟ್ ಚುನಾವಣೆಯಲ್ಲಿ ಟಿಕೇಟ್ ತಪ್ಪಿಸಿ ಇಂತಹ ಮೋಸ ಮಾಡಿದಿರಿ. ನನ್ನ ರಾಜಕೀಯ ಶಕ್ತಿ ಸಾಮರ್ಥ್ಯ ಏನು ಎನ್ನುವುದನ್ನು ಮುಂದಿನ ದಿನಗಳಲ್ಲಿ ತೋರಿಸುತ್ತೇನೆಂದು ರಾಜ್ಯದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರಿಗೆ ಹೊಳಲ್ಕೆರೆ ಕ್ಷೇತ್ರದ ಶಾಸಕ ಡಾ.ಎಂ.ಚಂದ್ರಪ್ಪ ಸವಾಲು ಹಾಕಿದರು.

ಚಳ್ಳಕೆರೆ ರಸ್ತೆಯಲ್ಲಿರುವ ಎ.ಜೆ.ಕನ್ವೆಂಷನ್ ಹಾಲ್‌ನಲ್ಲಿ ಶುಕ್ರವಾರ ಕರೆಯಲಾಗಿದ್ದ ಸ್ವಾಭಿಮಾನಿ ಕಾರ್ಯಕರ್ತರ ಸಭೆ ಉದ್ಘಾಟಿಸಿ ಮಾತನಾಡಿದರು.

2019 ರ ಲೋಕಸಭಾ ಚುನಾವಣೆಯಲ್ಲಿಯೇ ನನ್ನ ಮಗ ಎಂ.ಸಿ.ರಘುಚಂದನ್‌ಗೆ ಚಿತ್ರದುರ್ಗ ಕ್ಷೇತ್ರದಿಂದಟಿಕೇಟ್ ಕೇಳಿದ್ದೆ.ಆಗನನ್ನಮನೆಗೆ ಬಂದು ಬಿ.ಎಸ್.ಯಡಿಯೂರಪ್ಪನವರು ಮುಂದಿನ ಸಾರಿ ಅವಕಾಶ ಕೊಡುವುದಾಗಿ ಭರವಸೆ ನೀಡಿದ್ದರಿಂದ ಸುಮ್ಮನಾದೆವು. ಈ ಬಾರಿ ಕೊನೆ ಹಂತದವರೆಗೂ ನನ್ನ ಮಗನ ಹೆಸರಿತ್ತು. ಅಂತಿಮ ಗಳಿಗೆಯಲ್ಲಿ ಗೋವಿಂದ ಕಾರಜೋಳರನ್ನು ಚಿತ್ರದುರ್ಗ ಪಾರ್ಲಿಮೆಂಟ್ ಕ್ಷೇತ್ರದ ಅಭ್ಯರ್ಥಿಯನ್ನಾಗಿ ವರಿಷ್ಠರು ಘೋಷಿಸಿದ್ದಾರೆ. ನಮ್ಮ ಕುಟುಂಬ ರಾಜಕೀಯ ವಿರೋಧಿಗಳಿಗೂ ದ್ರೋಹ ಮಾಡಿಲ್ಲ. ನನ್ನ ಮಗ ಏನು ವಿಷ ಹಾಕಿದ್ದ ಎಂದು ಇಂತಹ ನಂಬಿಕೆ ದ್ರೋಹದ ಕೆಲಸ ಮಾಡಿದ್ದೀರ ಎಂದು ಕಣ್ಣಲ್ಲಿ ನೀರು ತೊಟ್ಟಿಕ್ಕುತ್ತ ಡಾ.ಎಂ.ಚಂದ್ರಪ್ಪ ತಮ್ಮ ಮನದಲ್ಲಿರುವ ದುಃಖವನ್ನು ಹೊರ ಹಾಕಿದರು.

ಈ ಬಾರಿಯ ಚುನಾವಣೆಯಲ್ಲಿ ನನ್ನ ಮಗನಿಗೆ ನೂರಕ್ಕೆ ನೂರು ಟಿಕೆಟ್ ಸಿಗುತ್ತದೆಂದು ನಂಬಿದ್ದೆ. ಆದರೆ ನಾನು ಯಾರನ್ನು ನಂಬಿದ್ದೆನೋ ಅವರೆ ನನ್ನ ಕತ್ತು ಕೊಯ್ದರು. ಹಾಗಾಗಿ ಸ್ವಾಭಿಮಾನಿ ಕಾರ್ಯಕರ್ತರ ಸಭೆ ಕರೆಯುವಂತ ಅನಿವಾರ್ಯ ಪರಿಸ್ಥಿತಿ ಒದಗಿ ಬಂದಿದೆ. ಇಂತಹ ಸಭೆಯಲ್ಲಿ ಮಾತನಾಡಲು ತುಂಬಾ ನೋವಾಗುತ್ತಿದೆ ಎಂದು ಗದ್ಗದಿತರಾದ ಡಾ.ಎಂ.ಚಂದ್ರಪ್ಪ ವಿಧಾನಸಭೆಯಲ್ಲಿ ಸೋತವರೊಬ್ಬರು ಎಂ.ಎಲ್.ಸಿ.ಯಾಗಲು ನನ್ನ ಬೆಂಬಲ ಬೇಕಿತ್ತು. ಆದರೆ ಈಗ ಪಕ್ಷದ ನಾಯಕರುಗಳಿಗೆ ಚಾಡಿ ಹೇಳಿ ನನ್ನ ಮಗ ಎಂ.ಸಿ.ರಘುಚಂದನ್‌ಗೆ ಟಿಕೇಟ್ ತಪ್ಪಿಸಿದರು. ಮುಂದೆ ಅವರಿಗೂ ಕಾದಿದೆ ಎಂದು ಹೆಸರು ಹೇಳಲಿಚ್ಚಿಸದೆ ವಾಗ್ದಾಳಿ ನಡೆಸಿದರು.

ಮೂವತ್ತು ವರ್ಷಗಳಿಂದಲೂ ರಾಜಕೀಯ ಮಾಡಿಕೊಂಡು ಬರುತ್ತಿದ್ದೇನೆ. 2008 ರಿಂದ ಬಿಜೆಪಿ.ಯಲ್ಲಿ ಮೂರು ಬಾರಿ ಶಾಸಕನಾಗಿ ಸಾರ್ವಜನಿಕರ ನಡುವೆ ಕೆಲಸ ಮಾಡುತ್ತಿದ್ದೇನೆ. ಬಾಣದ ಗುರ್ತಿಗೆ ಐದು ಜಿಲ್ಲೆಯಿಂದ ನಾನೊಬ್ಬನೆ ಶಾಸಕನಾಗಿದ್ದು, ಬಿ.ಎಸ್. ಯಡಿಯೂರಪ್ಪನವರು ಬಿಜೆಪಿ.ಯಿಂದ ಹೊರ ಬಂದು ಕೆ.ಜೆ.ಪಿ. ಪಕ್ಷ ಕಟ್ಟಿದಾಗ ಇನ್ನು ಏಳು ತಿಂಗಳು ಅವಧಿಯಿದ್ದಾಗಲೆ ಶಾಸಕ ಸ್ಥಾನಕ್ಕೆ ರಾಜಿನಾಮೆ ಕೊಟ್ಟು ಅವರ ಬೆನ್ನಿಗೆ ನಿಂತಿದ್ದೆ. ಆ ಕೃತಜ್ಞತೆಯೂ ಅವರಿಗಿಲ್ಲದಂತಾಯಿತು. ರಾಜ್ಯದ ಮುಖ್ಯಮಂತ್ರಿಯಾಗಬೇಕಾದರೆ ಭೋವಿ ಸಮಾಜದ ಗೂಳಿಹಟ್ಟಿ ಡಿ.ಶೇಖರ್, ಶಿವರಾಜ್ ತಂಗಡಗಿ, ವೆಂಕಟರಮಣಪ್ಪ ಇವರುಗಳು ನನ್ನ ಮಾತಿಗೆ ಬೆಲೆ ಕೊಟ್ಟು ಬೆಂಬಲಿಸಿದರು. ಭೋವಿ ಸಮಾಜ ಕೊಟ್ಟ ಮಾತಿಗೆ ತಪ್ಪುವವರಲ್ಲ. ಬಿ.ವೈ. ಯಡಿಯೂರಪ್ಪನವರಿಗಾಗಿ ಶಾಸಕ ಸ್ಥಾನಕ್ಕೆ ರಾಜಿನಾಮೆ ಕೊಟ್ಟೆ. ಅಷ್ಟೆ ಅಲ್ಲ. ಅವರಿಗಾಗಿ ಪ್ರಾಣ ಕೊಡಲು ಸಿದ್ದ ಎಂದು ಹೇಳಿದರು.

ಸರ್ವೆ ರಿಪೋರ್ಟ್, ಕಾರ್ಯಕರ್ತರ ಅಭಿಪ್ರಾಯಕ್ಕಾದರೂ ಪಕ್ಷದ ನಾಯಕರುಗಳು ಗೌರವ ಕೊಟ್ಟು ನನ್ನ ಮಗನಿಗೆ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಟಿಕೆಟ್ ನೀಡಬಹುದಿತ್ತು. ಅದನ್ನು ಬಿಟ್ಟು ಐದು ನೂರು ಕಿ.ಮೀ. ದೂರದಿಂದ ಗೋವಿಂದ ಕಾರಜೋಳರನ್ನು ಕರೆಸಿಕೊಳ್ಳುವ ಬಾಧೆ ಏನಿತ್ತು. 2019 ಎಲ್ಲಿ ನಡೆದ ಚುನಾವಣೆಯಲ್ಲಿ ಸ್ಪರ್ಧಿಸಿ ಗೆದ್ದು ಕೇಂದ್ರದ ಮಂತ್ರಿಯಾದ ಎ.ನಾರಾಯಣಸ್ವಾಮಿ ಜಿಲ್ಲೆಯಲ್ಲಿ ಎಲ್ಲಿಯಾದರೂ ಸುತ್ತಾಡಿದ್ದಾರಾ. ಯಾರಾದರು ಅವರ ಮುಖ ನೋಡಿದ್ದೀರ ಎಂದು ಸ್ವಾಭಿಮಾನಿ ಕಾರ್ಯಕರ್ತರನ್ನು ಪ್ರಶ್ನಿಸಿದ ಶಾಸಕ ಡಾ.ಎಂ.ಚಂದ್ರಪ್ಪ ಜನಾರ್ಧನರೆಡ್ಡಿ ನನಗೆ ಇಪ್ಪತ್ತೈದು ಕೋಟಿ ರೂ.ಆಸೆ ತೋರಿಸಿದರು. ಸತೀಶ್ ಜಾರಕಿಹೊಳಿ ಕೂಡ ನನಗೆ ಹಣದ ಆಮಿಷ ಹೊಡ್ಡಿದರು. ಎಂತಹ ಸಂದರ್ಭದಲ್ಲೂ ನಾನು ಬಿ.ಎಸ್.ಯಡಿಯೂರಪ್ಪನವರಿಗೆ ಮೋಸ ಮಾಡಲಿಲ್ಲ. ಗೋವಿಂದ ಕಾರಜೋಳ ನಿನಗೆ ನಾಚಿಕೆ ಆಗುತ್ತಿಲ್ವಾ ಇಲ್ಲಿಗೆ ಬಂದು ಸ್ಪರ್ಧಿಸುತ್ತಿದ್ದೀಯ ಎಂದು ಕಿಡಿ ಕಾರಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಟಿಕೆಟ್‌ನಿಂದ ವಂಚಿತರಾಗಿರುವ ಯುವ ಮುಖಂಡ ಎಂ.ಸಿ.ರಘುಚಂದನ್ ಮಾತನಾಡಿ ಎಂಟತ್ತು ವರ್ಷಗಳಿಂದಲೂ ಬಿಜೆಪಿ.ಯಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಿಕೊಂಡು ಬರುತ್ತಿದ್ದೇನೆ. 2019 ರಲ್ಲಿಯೇ ಚಿತ್ರದುರ್ಗ ಪಾರ್ಲಿಮೆಂಟ್ ಕ್ಷೇತ್ರದಿಂದ ಸ್ಪರ್ಧೆ ಬಯಸಿ ಟಿಕೆಟ್ ಕೇಳಿದ್ದೆ. ಆಗ ಬಿ.ಎಸ್.ಯಡಿಯೂರಪ್ಪನವರು ನಮ್ಮ ಮನೆಗೆ ಬಂದು ಈ ಬಾರಿ ಸುಮ್ಮನಿರು ಮುಂದಿನ ಸಲ ಖಂಡಿತ ನಿನಗೆ ಟಿಕೆಟ್ ಕೊಡಿಸುತ್ತೇನೆಂದುವಾಗ್ದಾನಮಾಡಿದ್ದರಿಂದ ನಮ್ಮ ತಂದೆಯವರು ಸುಮ್ಮನಾದರು. ಈ ಬಾರಿ ನನ್ನ ಹೆಸರು ಚರ್ಚೆಯಲ್ಲಿತ್ತು ಕೊನೆ ಗಳಿಗೆಯಲ್ಲಿ ಯಾರದೋ ಒತ್ತಡಕ್ಕೆ ಮಣಿದು ಗೋವಿಂದ ಕಾರಜೋಳರಿಗೆ ಟಿಕೆಟ್ ನೀಡಿದೆ.


ಪುಟ 2


## ಫಾಸ್ಟ್ ನ್ಯೂಸ್

### ಇಬ್ಬರು ಮಕ್ಕಳೊಂದಿಗೆ ಮಹಿಳೆ ನಾಪತ್ತೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಚಿನ್ನೂರ ತಿಪ್ಪಯ್ಯನಹಟ್ಟಿ ಗ್ರಾಮದ ಶಿವಮ್ಮ ಗಂಡ ಪಾಲಯ್ಯ (ಸು. 30 ವರ್ಷ) ಹಾಗೂ ಆಕೆಯ ಮಕ್ಕಳಾದ ಕಾರ್ತಿಕ(10ವರ್ಷ) ಭೂಮಿಕ(8ವರ್ಷ) ಈ ಮೂವರು ವ್ಯಕ್ತಿಗಳ ಕಾಣೆಯಾಗಿರುವ ಕುರಿತು ಮಾ.25 ರಂದು ತುರುವನೂರು ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದವರ ಚಹರೆ ಇಂತಿದೆ : ಶಿವಮ್ಮ 5 ಅಡಿ ಎತ್ತರ, ಗೋಧಿ ಬಣ್ಣ, ನೀಳ ಕೂದಲು, ಕೊರಳಿನಲ್ಲಿ ಕರಮಣಿ ತಾಳಿ ಇದೆ, ಮನೆಯಿಂದ ಹೋಗುವಾಗ ಮಾಸಲು ಬಣ್ಣದ ನೈಟಿ ಹಾಕಿರುತ್ತಾಳೆ. ಮಕ್ಕಳಾದ ಮಗ ಕಾರ್ತಿಕ್ 4ನೇ ತರಗತಿ ಹಾಗೂ ಮಗಳು ಭೂಮಿಕ 3ನೇ ತರಗತಿ ಓದುತ್ತಿದ್ದು, ನಾಲ್ಕುವರೆ ಅಡಿ ಎತ್ತರ, ಗೋದಿ ಬಣ್ಣ ಹೊಂದಿದ್ದು, ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುವವರು, ಮನೆಯಿಂದ ಹೋಗುವಾಗ ಇಬ್ಬರೂ ಶಾಲಾ ಸಮವಸ್ತ್ರವನ್ನೇ ಧರಿಸಿರುತ್ತಾರೆ.ಈ ಮೇಲ್ಕಂಡವರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಪೋಲಿಸ್ ಅಧೀಕ್ಷಕರು ಚಿತ್ರದುರ್ಗ ದೂರವಾಣಿ ಸಂಖ್ಯೆ : 9480803101, ಪೋಲಿಸ್ ಉಪಾಧೀಕ್ಷಕರು ಚಿತ್ರದುರ್ಗ ಉಪ ವಿಭಾಗ ದೂರವಾಣಿ ಸಂಖ್ಯೆ : 9480803120, ಪೋಲಿಸ್ ನಿರೀಕ್ಷಕರು ತುರುವನೂರು ಪೋಲಿಸ್ ಠಾಣೆ ದೂರವಾಣಿ ಸಂಖ್ಯೆ : 9480803149 ಗೆ ಸಂಪರ್ಕಿಸಲು ತುರುವನೂರು ಪೋಲಿಸ್ ಠಾಣೆ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 150 ರೇಷ್ಮೆ ಸೀರೆ ವಶ

» ಚಿತ್ರದುರ್ಗ

ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ತಿರುಮಲ ಡಾಬದ ಬಳಿಯ ಚಕ್ ಪೋಸ್ಟ್‌ನಲ್ಲಿ ಗುರುವಾರ 150 ರೇಷ್ಮೆ ಸೀರೆ ವಶ ಪಡಿಸಿಕೊಳ್ಳಲಾಗಿದೆ. ಚುನಾವಣೆ ಮಾದರಿ ನೀತಿ ಸಂಹಿತೆ ಹಿನ್ನಲೆಯಲ್ಲಿ ಚೆಕ್ ಪೋಸ್ಟ್‌ನಲ್ಲಿ ತಪಾಸಣೆ ನಡೆಸುವಾಗ ಸೂಕ್ತ ದಾಖಲೆಗಳು ಇಲ್ಲದ 150 ರೇಷ್ಮೆ ಸೀರೆ ಇತರೆ ವಸ್ತ್ರಗಳು ದೊರಕಿವೆ. ಇವುಗಳನ್ನು ವಶ ಪಡಿಸಿಕೊಂಡು ಚಿತ್ರದುರ್ಗ ಖಜಾನೆಯಲ್ಲಿ ಅಭಿರಕ್ಷೆಯಲ್ಲಿ ಇಡಲಾಗಿದೆ ಎಂದು ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ ತಿಳಿಸಿದ್ದಾರೆ.

### ಮತಗಟ್ಟೆಗಳಿಗೆ ಭೇಟಿ ನೀಡಿ ವ್ಯವಸ್ಥೆ ಪರಿಶೀಲಿಸಿದ: ತಿರುಪತಿ ಪಾಟೀಲ್



» ಹೊಸದುರ್ಗ

ತಾಲೂಕಿನ ಮಾಡದಕೆರೆ ಹೋಬಳಿಯ ಅತ್ತಿಮಗ್ಗೆ, ಮಾಳಿಗೆಹಟ್ಟಿ, ಎಂ.ಮಲ್ಲಾಪುರ, ರಾಮಜ್ಜನಹಳ್ಳಿ,ವಾಡದಕೆರೆ,ಬೇವಿನಹಳ್ಳಿ, ಐಯ್ಯನಹಳ್ಳಿ,ಶೀರನಕಟ್ಟೆ, ನಾಗಯ್ಯನಹಟ್ಟಿ, ಅಂಚಿಬಾರಿಹಟ್ಟಿ, ಮಾದಿಹಳ್ಳಿ, ಲಕ್ಕಿಹಳ್ಳಿ,ಕೆಂಕೆರೆ,ದೊಡ್ಡಕಿಟ್ಟದಹಳ್ಳಿ,ಸಣ್ಣಕಿಟ್ಟದಹಳ್ಳಿ, ನಾಕೀಕೆರೆ ಮತ್ತು ಪಾಣಿಕಿಟ್ಟದಹಳ್ಳಿ ಗ್ರಾಮಗಳ ಮತಗಟ್ಟೆಗಳಿಗೆ ಸಂಜೆ 5 ಗಂಟೆ ಸುಮಾರಿನಲ್ಲಿ ತಹಶೀಲ್ದಾರ್ ತಿರುಪತಿ ಪಾಟೀಲ್ ಭೇಟಿ ನೀಡಿ ಸಮಸ್ಯೆಗಳು ಮತ್ತು ಬೇಕಿರುವ ವ್ಯವಸ್ಥೆಯ ಕುರಿತಂತೆ ಪರಿಶೀಲಿಸಿದರು. ಮತಗಟ್ಟೆಗೆ ಭೇಟಿ ನೀಡಿದ ನಂತರ ಹಾಗಲಕೆರೆ ಚೆಕ್ ಪೋಸ್ಟ್ ಗೆ ಭೇಟಿ ನೀಡಿ ಸಿಬ್ಬಂದಿಗಳೊಂದಿಗೆ ರಸ್ತೆಯಲ್ಲಿ ಸಂಚರಿಸುವ ವಾಹನಗಳನ್ನು ಪರಿಶೀಲನೆ ಮಾಡಿದರು. ಈ ವೇಳೆ ಮಾಡದಕೆರೆ ರಾಜಸ್ವ ನಿರೀಕ್ಷಕರು. ಲಕ್ಕಿಹಳ್ಳಿ, ಮಾಡದಕೆರೆ, ದೊಡ್ಡಕಿಟ್ಟದಹಳ್ಳಿ ಮತ್ತು ಅತ್ತಿಮಗ್ಗೆಯ ಗ್ರಾಮಾಡಳಿತಾಧಿಕಾರಿಗಳು, ಶಿಕ್ಷಕರು ಹಾಗೂ ಪೊಲೀಸ್ ಸಿಬ್ಬಂದಿಗಳಿದ್ದರು.




ಕೆಪಿಸಿಸಿ ಅಧ್ಯಕ್ಷರು ಹಾಗೂ ಕರ್ನಾಟಕ ಸರ್ಕಾರದ ಉಪ ಮುಖ್ಯಮಂತ್ರಿಗಳು ಆದ ಡಿ.ಕೆ. ಶಿವಕುಮಾರ್ ರವರು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾದ ಬಿ.ಎನ್.ಚಂದ್ರಪ್ಪ ರವರಿಗೆ ಬಿ ಫಾರಂ ನೀಡಿದ ಸಂದರ್ಭ. ಈ ಸಂದರ್ಭದಲ್ಲಿ ಕೆಪಿಸಿಸಿ ಅಸಂಘಟಿತ ಕಾರ್ಮಿಕ ವಿಭಾಗದ ರಾಜ್ಯಾಧ್ಯಕ್ಷರಾದ ಜಿ. ಎಸ್. ಮಂಜುನಾಥ್ ರವರು ಜೊತೆಯಲ್ಲಿದ್ದಾರೆ.

ಪ್ರಮುಖ ಸುದ್ದಿ

# ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪಗಾಗಿ ಶ್ರಮಿಸಿ: ಶಾಸಕ

» ಹೊಸದುರ್ಗ




ಲೋಕಸಭೆ ಚುನಾವ ಣೆಯ ನಮ್ಮ ಚಿತ್ರದುರ್ಗ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ. ಎನ್.ಚಂದ್ರಪ್ಪ ಅವರ ಗೆಲುವಿಗೆ ನಮ್ಮ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಶ್ರಮ ವಹಿಸಬೇಕೆಂದು ಶಾಸಕ ಬಿ ಜಿ ಗೋವಿಂದಪ್ಪ ಅವರು ಮನವಿ ಮಾಡಿದರು. ಪಟ್ಟಣದ ಕಾಂಗ್ರೆಸ್ ಭವನದಲ್ಲಿ ಹೊಸದುರ್ಗ ತಾಲೂಕಿನ ಗ್ಯಾರಂಟಿ ಅನುಷ್ಠಾನ ಸಮಿತಿಯ ಪದಾಧಿಕಾರಿಗಳ ಸಭೆ ನಡೆಸಿ ನೂತನವಾಗಿ ಆಯ್ಕೆಯಾದಂತಹ ಪದಾಧಿಕಾರಿಗಳಿಗೆ ನೇಮಕಾತಿ ಆದೇಶ ಪತ್ರವನ್ನು ಅಧಿಕೃತವಾಗಿ ನೀಡಿ ಆಯ್ಕೆಯಾದವರಿಗೆ ಶುಭ ಕೋರಿ ಮಾತನಾಡಿದರು. ನಮ್ಮ ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಮಹತ್ವ ಹಾಗೂ ಜನರಿಗೆ ಆಗುತ್ತಿರುವ ಅನುಕೂಲದ ಬಗ್ಗೆ ತಿಳಿಸಿ ಬಿಜೆಪಿಯವರು ಮಾಡುತ್ತಿರುವ ಅಪಪ್ರಚಾರಕ್ಕೆ ಮತದಾರರು ಕಿವಿಗೊಡದಂತೆ ಮಾಡಬೇಕು.ಆ ಮೂಲಕ ನಮ್ಮ ಕಾಂಗ್ರೆಸ್ ಮತಗಳನ್ನು ಗಟ್ಟಿಗೊಳಿಸಬೇಕು.

ಈ ಬಾರಿ ಅಗ್ನಿಪರೀಕ್ಷೆ ಆಗಿರುವ ಈ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಗೆಲ್ಲಿಸಿ ಪಕ್ಷವನ್ನ ಕೇಂದ್ರದಲ್ಲಿ ಅಧಿಕಾರಕ್ಕೆ ತರುವ ಮೂಲಕ ಬಿಜೆಪಿಗೆ ತಕ್ಕ ಪಾಠ ಕಲಿಸಬೇಕೆಂದು ತಿಳಿಸಿದರು. ಹೊಸದುರ್ಗ ತಾಲೂಕಿನ ಗ್ಯಾರೆಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷರಾಗಿ ಆಯ್ಕೆಯಾದ ಮಹಮ್ಮದ್ ಇಸ್ಮೈಲ್. ಸದಸ್ಯರಾದಟಿಶ್ರೀನಿವಾಸ್ ಮೂರ್ತಿ. ಶರತ್, ಮಂಜುನಾಥ್, ರಾಜೇಂದ್ರ ಪ್ರಸಾದ್. ಶ್ರೀಮತಿ ಕವಿತಾ. ಶ್ರೀಮತಿಅನಿತಾ. ಎನ್ ಎಸ್ ಯು ಐ ಉಪಾಧ್ಯಕ್ಷ ಕೆ ಲೋಹಿತ್. ಅವರಿಗೆ ನೇಮಕಾತಿ ಆದೇಶ ಪತ್ರವನ್ನು ವಿತರಿಸಲಾಯಿತು. ಗ್ಯಾರೆಂಟಿ ಯೋಜನೆಯನ್ನ ವ್ಯಾಪಕವಾಗಿ ತಾಲೂಕಿನೆ ಲ್ಲಡೆ ಪ್ರಚಾರ ಮಾಡುವ ಮೂಲಕ ಕಾಂಗ್ರೆಸ್ ಅಧಿಕಾರಕ್ಕೆ ತರಲು ಶ್ರಮವಹಿಸಿ ಕೆಲಸ ಮಾಡಿ ಎಂದು ಮನವಿ ಮಾಡಿದರು. ಈ ವೇಳೆ ಕೆಪಿಸಿಸಿ ಸದಸ್ಯ ಎಂ ಪಿ ಶಂಕರ್. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪದ್ಮನಾಭ . ಹೊಸದುರ್ಗ ನಗರ ಮಹಿಳ ಘಟಕದ ಅಧ್ಯಕ್ಷೇ ದೀಪಿಕಾ ಸತೀಶ್.ಮುಖಂಡರಾದ ರಾಜಣ್ಣ. ಬಸವರಾಜ್ ಇನ್ನಿತರರು ಭಾಗವಹಿಸಿದ್ದರು.

### ಚಿತ್ರದುರ್ಗ ಲೋಕಸಭಾ ಚುನಾವಣೆ ಅಧಿಸೂಚನೆ ಪ್ರಕಟ: ಏ.4ರ ವರೆಗೆ ನಾಮಪತ್ರ ಸ್ವೀಕಾರ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದರ ಆಯ್ಕೆಗೆ ಮಾರ್ಚ್.28 ಗುರುವಾರದಂದು ಅಧಿಸೂಚನೆ ಹೊರಡಿಸಲಾಗಿದ್ದು, ನಾಮಪತ್ರ ಸ್ವೀಕರಿಸಲಾಗುತ್ತಿದೆ ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.



ನಂ.18 ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದ ಸ್ಥಾನ ಪರಿಶಿಷ್ಟ ಜಾತಿ ಮೀಸಲಾಗಿದೆ. ಚುನಾವಣಾಧಿಕಾರಿಗಳ ಕಾರ್ಯಾಲಯವನ್ನುನಗರದಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸ್ಥಾಪಿಸಲಾಗಿದೆ. ನಾಮಪತ್ರಗಳನ್ನು ಉಮೇದುವಾರರು ಅಥವಾ ಅವರ ಸೂಚಕರು ಚುನಾವಣಾಧಿಕಾರಿ ಅಥವಾ ಸಹಾಯಕ ಚುನಾವಣಾಧಿಕಾರಿಯಾದ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರಿಗೆ ಸಲ್ಲಿಸಬಹುದು.

ಸಾರ್ವತ್ರಿಕ ರಜಾದಿನ ಹೊರತು ಪಡಿಸಿ ಏಪ್ರಿಲ್ 4 ವರೆಗೆ ಪ್ರತಿದಿನ ಬೆಳಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 3.00 ಗಂಟೆಯವರೆಗೆ ನಾಮಪತ್ರ ಸ್ವೀಕರಿಸಲಾಗುವುದು. ನಾಮಪತ್ರ ಸಲ್ಲಿಸುವ ಅಭ್ಯರ್ಥಿಗಳು ನಾಮಪತ್ರದ ನಮೂನೆಗಳನ್ನು ಚುನಾವಣಾಧಿಕಾರಿಗಳ ಕಾರ್ಯಾಲಯದಿಂದ ಪಡೆದುಕೊಳ್ಳಬಹುದು.

ಏಪ್ರಿಲ್ 5 ರಂದು ಬೆಳಿಗ್ಗೆ 11.00ಗಂಟೆಗೆ ಚುನಾವಣಾಧಿಕಾರಿಗಳ ಕಾರ್ಯಾಲಯದಲ್ಲಿ ನಾಮಪತ್ರಗಳ ಪರಿಶೀಲನೆ ಕಾರ್ಯ ನಡೆಯಲಿದೆ. ನಾಮಪತ್ರಗಳನ್ನು ಹಿಂಪಡೆಯಲು ಇಚ್ಛೆಸಿದ್ದಲ್ಲಿ, ತಿಳಿವಳಿಕೆ ಪತ್ರವನ್ನು ಉಮೇದುವಾರ ಅಥವಾ ಸೂಚಕ ಅಥವಾ ಉಮೇದುವಾರ ನೇಮಿಸಿದ ಏಜೆಂಟ್ ಏಪ್ರಿಲ್ 8 ರಂದು ಮಧ್ಯಾಹ್ನ 3.00 ಗಂಟೆಗೆ ಮುಂಚೆ ಚುನಾವಣಾಧಿಕಾರಿಗೆ ಸಲ್ಲಿಸಬೇಕು. ಏಪ್ರಿಲ್ 26 ರಂದು ಬೆಳಗ್ಗೆ 7.00 ಗಂಟೆಯಿಂದ ಸಂಜೆ 6.00 ಗಂಟೆಯ ವರೆಗೆ ಮತದಾನ ನಡೆಯಲಿದೆ ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಹಿತಿ ನೀಡಿದ್ದಾರೆ.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |

| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |

## ಫಾಸ್ಟ್ ನ್ಯೂಸ್

### ಚುನಾವಣಾ ದೂರುಗಳಿಗೆ ಟೋಲ್ ಫ್ರೀ 1950

» **ಚಿತ್ರದುರ್ಗ**

ಸಾರ್ವಜನಿಕರು ಚುನಾವಣೆ ಪ್ರಕ್ರಿಯೆ ಸಂಬಂಧಿಸಿದಂತೆ ಯಾವುದೇ ಮಾಹಿತಿ ಮತ್ತು ದೂರುಗಳಿದ್ದಲ್ಲಿ ಮತದಾರರ ಟೋಲ್ ಫ್ರೀ ಸಂಖ್ಯೆ 1950 ಗೆ ಸಂಪರ್ಕಿಸಬಹುದು. ಕರೆ ಆಧರಿಸಿ ತಕ್ಷಣವೇ ಕ್ರಮ ಕೈಗೊಳ್ಳಲಾಗುವುದು. ದೂರದಾರರ ವಿವರಗಳನ್ನು ಸಹ ಗೌಪ್ಯವಾಗಿ ಇರಿಸಲಾಗುವುದು. ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾದಲ್ಲಿ ಸಾರ್ವಜನಿಕರು ದೂರುಗಳನ್ನು ಸಿ-ವಿಜಿಲ್ ಮೊಬೈಲ್ ಆಪ್ ಮೂಲಕವೂ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದ್ದಾರೆ.

### ನೀರಿನ ದುರ್ಬಳಕೆ ತಡೆಯಲು ಸೂಚನೆ

» **ಚಿತ್ರದುರ್ಗ**

ಗ್ರಾಮಗಳಲ್ಲಿ ಕುಡಿಯುವ ನೀರಿನ ಅಪವ್ಯಯ ಹಾಗೂ ಅನಧಿಕೃತ ದುರ್ಬಳಕೆ ತಡೆಗಟ್ಟುವಂತೆ ಹೊಳಲ್ಕೆರೆ ತಾ.ಪಂ. ಇಓ ಶಿವಪ್ರಕಾಶ್. ಎಸ್ ಸೂಚನೆ ನೀಡಿದರು. ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ಸಭಾಂಗದಲ್ಲಿ ಬುಧವಾರ ಕುಡಿಯುವ ನೀರಿನ ಸರಬರಾಜು ಕುರಿತು ಜರುಗಿದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು. ಪಿಡಿಓಗಳು ದಿನದ 24 ಗಂಟೆಯಲ್ಲಿಯೂ ಕರ್ತವ್ಯದಲ್ಲಿ ಇರಬೇಕು. ಸಾರ್ವಜನಿಕರಿಗೆ ಯಾವುದೇ ರೀತಿಯ ಕುಡಿಯುವ ನೀರಿನ ತೊಂದರೆಯಾಗದಂತೆ ನೀರು ನಿರ್ವಹಣೆ ಮಾಡಬೇಕು. ಕೊಳವೆ ಬಾವಿಗಳ ಅಂತರ್ಜಲ ಮಟ್ಟ ಕುಸಿದಿರುವುದರಿಂದ ಹೆಚ್ಚಿನ ಪೈಪ್ ಗಳನ್ನು ಕೊಳವೆ ಬಾವಿಗಳಿಗೆ ಅಳವಡಿಸಿ ನೀರು ಪೂರೈಕೆಗೆ ಕ್ರಮಕೈಗೊಳ್ಳಬೇಕು ಎಂದರು. ಕುಡಿಯುವ ನೀರಿನ ತೊಂದರೆಯಾಗದಂತೆ ನೀರು ನಿರ್ವಹಣೆ ಮಾಡಲು ತಾಲ್ಲೂಕು ಆಡಳಿತ ಮತ್ತು ಜಿಲ್ಲಾಡಳಿತ ತಮ್ಮ ಜೊತೆಗೆ ಸದಾ ಇರುತ್ತದೆ. ಯಾವುದೇ ರೀತಿಯ ಕರ್ತವ್ಯ ನಿರ್ಲಕ್ಷ್ಯತೆ ಕಂಡು ಬಂದಲ್ಲಿ ಕಟ್ಟು ನಿಟ್ಟಿನ ಕ್ರಮ ಜರುಗಿಸಲಾಗುವುದು ಎಂದು ಇಓ ಶಿವಪ್ರಕಾಶ್ ಎಚ್ಚರಿಸಿದರು. ಹೊಳಲ್ಕೆರೆ ವ್ಯಾಪ್ತಿಯಲ್ಲಿ 17 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. 8 ಖಾಸಗಿ ಬೋರ್ ವೆಲ್‌ಗಳನ್ನು ಗ್ರಾಮ ಪಂಚಾಯಿತಿಯಿಂದ ಬಾಡಿಗೆ ಪಡೆಯಲಾಗಿದೆ. ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಸಹಾಯಕ ಕಾರ್ಯಪಾಲಕ ಅಭಿಯಂತರ ವೈ.ನೀಲಕಂಠ ಸೇರಿದಂತೆ ಪಿಡಿಓಗಳು ಇದ್ದರು.

### ತಾಲ್ಲೂಕು ವಿಸ್ತರಣಾಧಿಕಾರಿ ಕಛೇರಿ ಸ್ಥಳಾಂತರ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಸ್ಟೇಡಿಯಂ ರಸ್ತೆಯಲ್ಲಿಯ ಶ್ರೀ ರಾಮ ಕಾಂಪ್ಲೆಕ್ಸ್ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಚಿತ್ರದುರ್ಗ ಉಪವಿಭಾಗದ ತಾಲ್ಲೂಕು ವಿಸ್ತರಣಾಧಿಕಾರಿಗಳ ಕಚೇರಿ ಮತ್ತು ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರವನ್ನು ಸ್ಥಳಾಂತರಿಸಲಾಗಿದೆ. ಏಪ್ರಿಲ್ 1 ರಿಂದ ನಗರದ ನ್ಯಾಷನಲ್ ಹೋಟೆಲ್ ಹತ್ತಿರದ ಸರಸ್ವತಿಪುರಂ 1ನೇ ಮುಖ್ಯ ರಸ್ತೆಯ, ಶ್ರೀ ಆಂಜನೇಯ ನಿಲಯದಲ್ಲಿ ಕಚೇರಿ ಕಾರ್ಯ ನಿರ್ವಹಿಸಲಿದೆ. ಸಾರ್ವಜನಿಕರು ಸ್ಥಳಾಂತರಗೊಂಡಿರುವ ಕಛೇರಿಯ ವಿಳಾಸಕ್ಕೆ ಭೇಟಿ ನೀಡಿ ಅಗತ್ಯ ಸೇವೆ, ಮಾಹಿತಿಯನ್ನು ಪಡೆದುಕೊಳ್ಳಬಹುದು ಎಂದು ತಾಲ್ಲೂಕು ವಿಸ್ತರಣಾಧಿಕಾರಿ ಪ್ರಕಟಣೆಯಲ್ಲಿ ಕೋರಿದ್ದಾರೆ.

### ಮಾ.28ರಂದು ಯಾವುದೇ ನಾಮಪತ್ರ ಸ್ವೀಕೃತವಾಗಿಲ್ಲ

» **ಚಿತ್ರದುರ್ಗ**

ಚಿತ್ರದುರ್ಗ ಲೋಕಸಭಾ ಕ್ಷೇತ್ರ ಚುನಾವಣೆಗೆ ಅಧಿಸೂಚನೆ ಹೊರಡಿಸಲಾಗಿದೆ. ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದ್ದು, ಗುರುವಾರ ಯಾವುದೇ ನಾಮಪತ್ರ ಸ್ವೀಕೃತವಾಗಿರುವುದಿಲ್ಲ ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ನಂ.18 ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದ ಸ್ಥಾನ ಪರಿಶಿಷ್ಟ ಜಾತಿಗೆ ಮೀಸಲಾಗಿದೆ. ಚುನಾವಣಾಧಿಕಾರಿಗಳ ಕಾರ್ಯಾಲಯವನ್ನು ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸ್ಥಾಪಿಸಲಾಗಿದೆ. ಮಾರ್ಚ್ 28 ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಿದ್ದು, ಸಾರ್ವತ್ರಿಕ ರಜಾ ದಿನ ಹೊರತುಪಡಿಸಿ, ಪ್ರತಿ ದಿನ ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರಗಳನ್ನು ಸ್ವೀಕಾರ ಮಾಡಲಾಗುತ್ತದೆ. ಏಪ್ರಿಲ್ 04 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ.

### ಏ.01 ರಿಂದ ಕಾಲುಬಾಯಿ ಲಸಿಕಾ ಕಾರ್ಯಕ್ರಮ

» **ಚಿತ್ರದುರ್ಗ**

ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ವತಿಯಿಂದ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 5ನೇ ಸುತ್ತಿನ ಕಾಲು ಬಾಯಿ ಲಸಿಕಾ ಅಭಿಯಾನವನ್ನು ಏಪ್ರಿಲ್ 01 ರಿಂದ 30 ರವರೆಗೆ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯಾದ್ಯಂತ ದನ, ಎಮ್ಮೆ ಮತ್ತು ಕರುಗಳಿಗೆ ಉಚಿತವಾಗಿ ಕಾಲುಬಾಯಿ ಲಸಿಕೆ ಹಾಕಲಾಗುವುದು.

# ಸ್ತ್ರೀಯರಿಗೆ ರಾಜಕೀಯ ಮೀಸಲಾತಿ ನೀಡಿದ್ದು ಮೋದಿ

» **ದಾವಣಗೆರೆ**

ಪ್ರಧಾನಿ ನರೇಂದ್ರ ಮೋದಿ ಅವರು ಮಹಿಳೆಯರಿಗೆ ರಾಜಕೀಯದಲ್ಲಿ ಶೇ.33 ರಷ್ಟು ಮೀಸಲಾತಿ ನೀಡುವ ಮೂಲಕ ಮಹಿಳಾ ಶಕ್ತಿಗೆ ಮುನ್ನುಡಿ ಬರೆದಿದ್ದಾರೆ ಎಂದು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ್ ತಿಳಿಸಿದರು.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮಗಳಲ್ಲಿ ಪ್ರಚಾರ ಕಾರ್ಯ ನಡೆಸಿದ ಅವರು, ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಮಹಿಳೆಯರಿಗೆ ರಾಜಕೀಯ ಪ್ರಾತಿನಿಧ್ಯ ನೀಡುವ ಸಲುವಾಗಿ ರಾಜಕೀಯದಲ್ಲಿ ಶೇ.33 ರಷ್ಟು ಮೀಸಲಾತಿ ನೀಡಿದ್ದಾರೆ. ಅದರ ಪರಿಣಾಮವಾಗಿ ನಾನೊಬ್ಬ ಮಹಿಳಾ ಅಭ್ಯರ್ಥಿಯಾಗಿ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿದ್ದೇನೆ ಎಂದರು.

ಹೆಣ್ಣುಮಕ್ಕಳ ಶಿಕ್ಷಣ, ಮಹಿಳಾ ಸ್ವಾವಲಂಬನೆಗೆ ಸಾಕಷ್ಟು ಯೋಜನೆ ಜಾರಿಗೊಳಿಸಿದ್ದಾರೆ. ಬೇಟಿ ಬಚಾವೋ, ಬೇಟಿ ಪಢಾವೋ ಮೂಲಕ ಕೋಟ್ಯಂತರ ಹಣ್ಣು ಮಕ್ಕಳ ಪಾಲಿಗೆ ಆಶಾ ಕಿರಣವಾಗಿದ್ದಾರೆ ಎಂದರು.

ದಾವಣಗೆರೆ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸಂಸದ ಜಿ.ಎಂ.ಸಿದ್ದೇಶ್ವರ್ ಅವರು ಕೋಟ್ಯಂತರ ರೂಪಾಯಿ ಅನುದಾನ ತಂದಿದ್ದಾರೆ. ನಾವು ಇಷ್ಟು ವರ್ಷ ಮಾಡಿರೋ ಅಭಿವೃದ್ಧಿ ಕಾರ್ಯಗಳ ರಿಪೋರ್ಟ್ ಕಾರ್ಡ್ ಬಿಡುಗಡೆ ಮಾಡಿದ್ದೇವೆ. ಇದುವರೆಗೂ ಪಾರದರ್ಶಕ ಆಡಳಿತ ನೀಡಿದ್ದಕ್ಕೆ ಲೋಕಸಭಾ ಕ್ಷೇತ್ರದ ಮತದಾರರು ನಮ್ಮನ್ನು ಆರಿಸಿ ಲೋಕಸಭೆಗೆ ಕಳುಹಿಸಿದ್ದಾರೆ. ಈ ಬಾರಿಯೂ ನನಗೆ ಮತ ನೀಡುವ ಮೂಲಕ ಅಭಿವೃದ್ಧಿ ಮತ್ತು ಪಾರದರ್ಶಕ ಆಡಳಿತಕ್ಕೆ ಮತ್ತೊಮ್ಮೆ ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು.ಹೊಸ ಬೆಳವನೂರು ಗ್ರಾಮದ ಗಣಪತಿ, ಬಸವೇಶ್ವರ ದೇವಾಲಯಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದರು. ಬಳಿಕ ಗ್ರಾಮದ ಬೂತ್ ಅಧ್ಯಕ್ಷ ತಿಪ್ಪೇಸ್ವಾಮಿ, ಜೆಡಿಎಸ್ ಮುಖಂಡ ನಾಗೇಶ್ವರರಾವ್ ನಿವಾಸಕ್ಕೆ ಭೇಟಿ ನೀಡಿ, ಉಭಯ ಕುಶಲೋಪರಿ ವಿಚಾರಿಸಿದರು.ಹೊಸ ತುರ್ಚಘಟ್ಟ ಗ್ರಾಮದಲ್ಲಿ ತೆರೆದ ವಾಹನದಲ್ಲಿ ಪ್ರಚಾರ ನಡೆಸಿದರು. ಬಿಜೆಪಿ ಮುಖಂಡರಾದ ಗಂಗಮ್ಮ ಅವರ ನಿವಾಸಕ್ಕೆ ಭೇಟಿ ನೀಡಿ ಮಾತುಕತೆ ನಡೆಸಿದರು.ಕೈದಾಳೆ ಗ್ರಾಮದ ಮಲ್ಲಿಕಾರ್ಜುನ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ, ದೇವರ ದರ್ಶನ ಪಡೆದರು.ಬಳಿಕಗ್ರಾಮದಲ್ಲಿಮತಯಾಚನೆ ಮಾಡಿದರು. ಕೈದಾಳೆ ಗ್ರಾಮದ ಬೂತ್ ಅಧ್ಯಕ್ಷ ಕೇಶವಮೂರ್ತಿ, ಮುಖಂಡರಾದ ಮಲ್ಲಿಕಾರ್ಜುನ್ ಅವರ ನಿವಾಸಕ್ಕೆ ಭೇಟಿ ನೀಡಿ ಮಾತುಕತೆ ನಡೆಸಿದರು.




ಕುಕ್ಕುವಾಡ, ಹೊಸಕೊಳೇನಹಳ್ಳಿ, ನಾಗರಸನಹಳ್ಳಿ, ಕನಗೊಂಡನಹಳ್ಳಿ, ಹದಡಿ, ಮುದಹದಡಿ, ಜರೇಕಟ್ಟೆ, ನಾಗನೂರು ಸೇರಿದಂತೆ 15 ಕ್ಕೂ ಹೆಚ್ಚು ಗ್ರಾಮಗಳಲ್ಲಿ ಪ್ರಚಾರ ನಡೆಸಿದರು.

ಪ್ರತಿ ಗ್ರಾಮಕ್ಕೂ ಭೇಟಿ ನೀಡಿದಾಗ ಬೂತ್ ಅಧ್ಯಕ್ಷರು, ಸಾಮಾನ್ಯ ಕಾರ್ಯಕರ್ತರ, ಜೆಡಿಎಸ್ ಮುಖಂಡರ, ಕಾರ್ಯಕರ್ತರ ಮನೆಗಳಿಗೆ ಭೇಟಿ ನೀಡಿ ಚರ್ಚಿಸಿದರು.ಜೆಡಿಎಸ್ ಹಿರಿಯ ಮುಖಂಡ ನಾಗೇಶ್ವರರಾವ್, ದೂಡಾ ಮಾಜಿ ಅಧ್ಯಕ್ಷ ಯಶವಂತರಾವ್ ಜಾಧವ್, ಒಬಿಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ರಾಜನಹಳ್ಳಿ ಶಿವಕುಮಾರ್, ಎಸ್ಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ಶ್ರೀನಿವಾಸ ದಾಸ್ ಕರಿಯಪ್ಪ, ವಿಜಯ್ ಕುಮಾರ್, ಗುರು ಪ್ರಸಾದ್, ಗುರುಮೂರ್ತಿ, ದಕ್ಷಿಣ ಅಧ್ಯಕ್ಷ ಆನಂದ್ ರಾವ್ ಸಿಂಧೆ, ರಾಜು ನೀಲಗುಂದ, ಡಿ.ಎಲ್.ಶಿವಪ್ರಕಾಶ್ ಮತ್ತು ಎಲ್ಲ ಗ್ರಾಮಗಳ ಮುಖಂಡರು ಪ್ರಚಾರಕ್ಕೆ ಸಾಥ್ ನೀಡಿದ್ದರು.

# ಮತದಾನ ಹೆಚ್ಚಳಕ್ಕೆ ಜಾಗೃತಿ: ನಗರದಲ್ಲಿ ಜಾಥಾ

» **ಚಿತ್ರದುರ್ಗ**

ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಚಿತ್ರದುರ್ಗ ನಗರ ವ್ಯಾಪ್ತಿಯ ಕಡಿಮೆ ಮತದಾನವಾಗಿರುವ ಮತಗಟ್ಟೆ ಪ್ರದೇಶಗಳಲ್ಲಿ ಮತದಾನ ಹೆಚ್ಚಳ ಮಾಡುವ ಸಲುವಾಗಿ ವಾಕಥಾನ್ ಮೂಲಕ ಜಾಗೃತಿ ಮೂಡಿಸಲಾಯಿತು. ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಚಿತ್ರದುರ್ಗ ನಗರದ ನಗರಸಭಾ ವ್ಯಾಪ್ತಿಯ ಕಡಿಮೆ ಮತದಾನವಾಗಿರುವ ನಗರದ ದೊಡ್ಡಪೇಟೆ, ಕರುವಿನಕಟ್ಟೆ, ಜೋಗಿಮಟ್ಟಿ ರಸ್ತೆ ಮತಗಟ್ಟೆ ಪ್ರದೇಶಗಳಲ್ಲಿ ವಾಕಥಾನ್ ಮೂಲಕ ಮತದಾನದ ಕುರಿತು ಅರಿವು ಮೂಡಿಸಲಾಯಿತು.

ಈ ವೇಳೆ ಮಾತನಾಡಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಎಸ್.ಜೆ.ಸೋಮಶೇಖರ್, ಚಿತ್ರದುರ್ಗ ನಗರದ ನಗರಸಭಾ ವ್ಯಾಪ್ತಿಯ ಕಡಿಮೆ ಮತದಾನ ಪ್ರಮಾಣ ದಾಖಲಾಗಿರುವ ಮತಗಟ್ಟೆ ಪ್ರದೇಶಗಳಲ್ಲಿ ಮತದಾನ ಜಾಗೃತಿಗಾಗಿ ವಾಕ್‌ಥಾನ್, ಮ್ಯಾರಥಾನ್ ಸೇರಿದಂತೆ ವಿನೂತನ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಮನೆ ಮನೆಗೆ ತೆರಳಿ ಮತದಾನದ ಪ್ರಮಾಣ ಹೆಚ್ಚಳ ಮಾಡುವ ನಿಟ್ಟಿನಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಹೇಳಿದರು.




ಮತದಾನ ಜಾಗೃತಿಗಾಗಿ ಹಮ್ಮಿಕೊಂಡಿದ್ದ ವಾಕ್‌ಥಾನ್ ಜಾಥಾ ಕಾರ್ಯಕ್ರಮದಲ್ಲಿ ಮತ ಚಲಾಯಿಸೋಣ ಪ್ರಜಾಪ್ರಭುತ್ವ ಗಟ್ಟಿಗೊಳಿಸೋಣ, ಮತದಾನ ಮಾಡುವುದು ಪ್ರತಿಯೊಬ್ಬ ಮಾಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ, ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಿ ಪ್ರಜಾಪ್ರಭುತ್ವ ಬಲಗೊಳಿಸಿ, ಮತ ಚಲಾಯಿಸಿ ಪ್ರಜಾಪ್ರಭುತ್ವ ಉಳಿಸಿ, ಓದು ವ್ಯಕ್ತಿತ್ವವನ್ನು ರೂಪಿಸುತ್ತದೆ. ಮತದಾನ ದೇಶವನ್ನು ರೂಪಿಸುತ್ತದೆ. ನೇತ್ರದಾನ ಮಹಾದಾನ, ಮತದಾನ ಶ್ರೇಷ್ಠದಾನ ಎಂಬಿತ್ಯಾದಿ ಜಾಗೃತಿ ಫಲಕಗಳು ಗಮನ ಸೆಳೆದವು. ಚಿತ್ರದುರ್ಗ ನಗರದ ಐತಿಹಾಸಿಕ ಕೋಟೆ ಮುಂಭಾಗದ ಪ್ರಾರಂಭವಾದ ವಾಕಥಾನ್, ಪಿಲ್ಲರ್ ಹೌಸ್, ಸಂಪಿಗೆ ಸಿದ್ದೇಶ್ವರ ಶಾಲೆ, ದೊಡ್ಡಪೇಟೆ, ರಂಗಯ್ಯನಬಾಗಿಲು, ಉಜ್ಜಿನಿ ಮಠದ ರಸ್ತೆ, ಕರುವಿನಕಟ್ಟೆ ವೃತ್ತ, ಜೋಗಿಮಟ್ಟಿ ರಸ್ತೆ, ಜಂಟಿ ನಿರ್ದೇಶಕರ ಕೈಗಾರಿಕಾ ಇಲಾಖೆ ಕಚೇರಿ, ಪಟ್ಟದ ಪರಮೇಶ್ವರ ಶಾಲೆಯ ಮೂಲಕ ಜಿಲ್ಲಾ ಕ್ರೀಡಾಂಗಣದವರೆಗೂ ಜಾಥಾ ನಡೆಯಿತು.

ಈ ಸಂದರ್ಭದಲ್ಲಿ ಜಿ.ಪಂ ಸಿಇಓ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ನಗರಸಭೆ ಪೌರಾಯಕ್ತೆ ಎಂ.ರೇಣಕಾ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಓ.ಪರಮೇಶ್ವರಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಆಶಾ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

# ಸಿ.ಆರ್.ಕೃಷ್ಣಪ್ಪಗೆ ಬಿಳ್ಕೊಡುಗೆ



» **ಚಿತ್ರದುರ್ಗ**

ಓರಿಯಂಟಲ್ ಇನ್ಶುರೆನ್ಸ್ ಕಂಪನಿಯಲ್ಲಿ ಹಿರಿಯ ಸಹಾಯಕರಾಗಿ ಕಾರ್ಯನಿರ್ವಹಿಸಿ, ವಯೋನಿವೃತ್ತಿ ಹೊಂದಿದ ಚಿತ್ರದುರ್ಗ ನಗರದ ಬುರುಜನಹಟ್ಟಿಯ ಸಿ.ಆರ್.ಕೃಷ್ಣಪ್ಪ ಅವರಿಗೆ ಗುರುವಾರ ಬಿಳ್ಕೊಡುಗೆ ನೀಡಲಾಯಿತು. ಚಿತ್ರದುರ್ಗ ಓರಿಯಂಟಲ್ ಇನ್ಶುರೆನ್ಸ್ ಕಂಪನಿಯಲ್ಲಿ ಕ್ಯಾಷಿಯರ್ ಹಾಗೂ ಸಹಾಯಕವಾಗಿ ಕಾರ್ಯನಿರ್ವಹಿಸಿದ್ದು, ಈಚೆಗೆ ಹಿರಿಯ ಸಹಾಯಕರಾಗಿ ಬಡ್ತಿ ನೀಡಿ, ತಿಪಟೂರು ಶಾಖೆಗೆ ವರ್ಗಾವಣೆ ಮಾಡಲಾಗಿತ್ತು. ವಯೋನಿವೃತ್ತಿ ಹೊಂದಿದ ಹಿನ್ನಲೆಯಲ್ಲಿ ತಿಪಟೂರು ಶಾಖೆಯಲ್ಲಿ ಹಿರಿಯ ಸಹಾಯಕ ಸಿ.ಆರ್.ಕೃಷ್ಣಪ್ಪ ಅವರಿಗೆ ಆತ್ಮೀಯ ಬಿಳ್ಕೊಡುಗೆ ನೀಡಿ, ಸನ್ಮಾನಿಸಲಾಯಿತು.ಸಿ.ಆರ್.ಕೃಷ್ಣಪ್ಪ ಅವರು ಓರಿಯಂಟಲ್ ಇನ್ಶುರೆನ್ಸ್ ಕಂಪನಿಗೆ 1991ರಂದು ಸೇವೆ ಸೇರಿದ್ದು, 32 ವರ್ಷ 3 ತಿಂಗಳ ಕಾಲ ಸೇವೆಯನ್ನು ಸಲ್ಲಿಸಿದ್ದಾರೆ. ಈ ಸಂದರ್ಭದಲ್ಲಿ ಓರಿಯಂಟಲ್ ಇನ್ಶುರೆನ್ಸ್ ಕಂಪನಿಯ ವಿಭಾಗೀಯ ಹಿರಿಯ ವ್ಯವಸ್ಥಾಪಕ ರಾಜು, ಆಡಳಿತಾತ್ಮಕ ಅಧಿಕಾರಿ ನವೀನ್ ಕುಮಾರ್ ಸೇರಿದಂತೆ ಸಿಬ್ಬಂದಿ ವರ್ಗ ಹಾಗೂ ಓರಿಯಂಟಲ್ ಇನ್ಶುರೆನ್ಸ್ ಕಂಪನಿಯ ಏಜೆಂಟರು ಇದ್ದರು.

# ಶ್ರೀ ಅಗ್ನಿಬನ್ನಿರಾಯಸ್ವಾಮಿ ಜಯಂತಿ: ಸರಳ ಆಚರಣೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಶ್ರೀ ಅಗ್ನಿಬನ್ನಿರಾಯಸ್ವಾಮಿ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಯಿತು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಶ್ರೀ ಅಗ್ನಿ ಬನ್ನಿರಾಯಸ್ವಾಮಿ ಜಯಂತಿ ಕಾರ್ಯಕ್ರಮವನ್ನು ಲೋಕಸಭಾ ಸಾರ್ವತ್ರಿಕ ಚುನಾವಣೆ ನೀತಿ ಸಂಹಿತೆ ಜಾರಿ ಹಿನ್ನಲೆಯಲ್ಲಿ ಸರಳವಾಗಿ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಶ್ರೀ ಅಗ್ನಿಬನ್ನಿರಾಯಸ್ವಾಮಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು.ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.



# ನಿವೇಶನಕ್ಕಾಗಿ ಅಹೋರಾತ್ರಿ ಧರಣಿ: ತಹಶೀಲ್ದಾರ್ ಭೇಟಿ ಶೆಡ್ ತೆರವು

» **ಚಳ್ಳಕೆರೆ**

ತಾಲ್ಲೂಕಿನ ಸೋಮಗುದ್ದು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಂಜಿಗುಂಟೆ ಗ್ರಾಮದಲ್ಲಿ ಸರ್ಕಾರಿ ಗೋಮಾಳವನ್ನು ಒತ್ತುವರಿ ಗುಡಿಸಲು ನಿರ್ಮಿಸಿಕೊಂಡ ಬಗ್ಗೆ ಪತ್ರಿಕೆ ಅಲ್ಲಿನ ಮಹಿಳೆಯರು ನಿವೇಶನಕ್ಕಾಗಿ ಆಹೋರಾತ್ರಿ ಧರಣಿ ನಡೆಸಿದ ಸುದ್ದಿಯನ್ನು ಪ್ರಕಟಿಸಿತ್ತು. ಪತ್ರಿಕಾ ವರದಿ ಹಿನ್ನೆಲೆಯಲ್ಲಿ ಎಚ್ಚೆತ್ತುಗೊಂಡ ತಾಲ್ಲೂಕು ಆಡಳಿತ ತಹಶೀಲ್ದಾರ ರೇಹಾನ್‌ಪಾಷ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಲಕ್ಷ್ಮಣ್, ಠಾಣಾ ಇನ್ಸ್‌ಪೆಕ್ಟರ್ ಕೆ.ಕುಮಾರ್, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಲೆಕ್ಕಿಗ ಕೇಶವಚಾರಿ ಹಾಗೂ ಪೊಲೀಸ್ ಇಲಾಖೆ ಮಂಗಳವಾರ ತಡರಾತ್ರಿ ಗ್ರಾಮಕ್ಕೆ ಭೇಟಿ ನೀಡಿ ಸರ್ಕಾರಿ ಗೋಮಾಳದಲ್ಲಿ ಒತ್ತುವರಿ ಮಾಡಿಕೊಂಡವರನ್ನು ತೆರವುಗೊಳಿಸಿದರು. ಈ ಬಗ್ಗೆ ಮಾಹಿತಿ ನೀಡಿದ ತಹಶೀಲ್ದಾರ್ ರೇಹಾನ್‌ಪಾಷ, ಗಂಜಿಗುಂಟೆ ಗ್ರಾಮದ ರಿ.ಸರ್ವೆ ನಂ. 105ರಲ್ಲಿ 5 ಎಕರೆ ಸರ್ಕಾರಿ ಗೋಮಾಳವಿದೆ. ಈ ಭಾಗದ ನಿವೇಶನವಿಲ್ಲದೆ ಕಳೆದ ಹಲವಾರು ವರ್ಷಗಳಿಂದ ಸರ್ಕಾರಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಅದರಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ.

## ಪ್ರಮುಖ ಸುದ್ದಿ

# ಬಂಡಾಯದ ಮುನ್ಸೂಚನೆ ನೀಡಿದ ಸ್ವಾಭಿಮಾನಿ ಕಾರ್ಯಕರ್ತರ ಸಭೆ

» **ಮೊದಲ ಪುಟದಿಂದ**

ಗೂಡು ಕಟ್ಟಲು ಕಾರ್ಯಕರ್ತರು ಬೇಕು? ಸ್ಪರ್ಧಿಸಲು ಮಾತ್ರ ಹೊರಗಿನವರನ್ನು ಕರೆತರುವುದು ಯಾವ ನ್ಯಾಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಮ್ಮ ಜಿಲ್ಲೆಯಲ್ಲಿನ ಕೆಲವು ಕಳ್ಳಿನರಸಪ್ಪನಂತಹವರು ನನಗೆ ಟಿಕೆಟ್ ತಪ್ಪಿಸಿದ್ದಾರೆ. ಚುನಾವಣೆ ಬರುತ್ತೆ ಹೋಗುತ್ತೆ. ಕಾರ್ಯಕರ್ತರ ವಿಶ್ವಾಸಕ್ಕೆ ಯಾವುದೇ ಧಕ್ಕೆಯಾಗಬಾರದು. ನನಗೆ ವಂಚನೆ ಮಾಡಿರಬಹುದು. ಮುಂದೊಂದು ದಿನ ಅವರ ಮಕ್ಕಳಿಗೂ ಇದೆ ಪರಿಸ್ಥಿತಿ ಬರಬಹುದು. ಯಾರಿಗೂ ಮುಜುಗರವಾಗದಂತೆ ನಡೆದುಕೊಂಡು ನನ್ನ ತಂದೆಯವರು ಹಾಗೂ ಕಾರ್ಯಕರ್ತರು ತೆಗೆದುಕೊಳ್ಳುವ ತೀರ್ಮಾನಕ್ಕೆ ತಲೆಬಾಗುವೆ ಎಂದು ನುಡಿದರು.

ಬಿಜೆಪಿ. ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಮಲ್ಲಿಕಾರ್ಜುನ್ ಮಾತನಾಡಿ ಯುವ ಮುಖಂಡ ಎಂ.ಸಿ.ರಘುಚಂದನ್‌ಗೆ ಟಿಕೆಟ್ ಸಿಗದಿರುವುದು ಮನಸ್ಸಿಗೆ ತುಂಬಾ ನೋವಾಗಿದೆ. ಕಳೆದ ಬಾರಿಯೇ ಕೇಳಿದ್ದರು. ಆದರೆ ಕೆಲವರ ಕುತಂತ್ರದಿಂದ ಟಿಕೆಟ್ ಕೈತಪ್ಪಿದೆ ಎಂದು ಹೇಳಿದರು. ಹೊಳಲ್ಕೆರೆ ನಗರಸಭೆ ಮಾಜಿ ಅಧ್ಯಕ್ಷ ಚಂದ್ರಶೇಖರ್ ಮಾತನಾಡಿ ದುರ್ಗದವರನ್ನು ಕಡೆಗಣಿಸಿ ಹೊರಗಿನ ಗೋವಿಂದ ಕಾರಜೋಳರವರನ್ನು ಕರೆ ತಂದು ಇಲ್ಲಿಂದ ಸ್ಪರ್ಧೆಗಿಳಿಸುವ ಅಗತ್ಯವೇನಿತ್ತು? ಈಗಲು ಚಿತ್ರದುರ್ಗದವರಿಗೆ ಟಿಕೆಟ್ ಕೊಡಿ ಗೆಲ್ಲಿಸಿಕೊಂಡು ಬರುತ್ತೇವೆಂದರು.



ಮಡಿವಾಳ ಸಮಾಜದ ಜಿಲ್ಲಾಧ್ಯಕ್ಷ ಬಿ.ರಾಮಜ್ಜ ಮಾತನಾಡುತ್ತ ಟಿಕೆಟ್ ಕೊಡುತ್ತೇವೆಂದು ಮಾತು ಕೊಟ್ಟು ಕೊನೆಗಳಿಗೆಯಲ್ಲಿ ಎಂ.ಸಿ.ರಘುಚಂದನ್‌ಗೆ ಮೋಸ ಮಾಡಿರುವುದು ಪರಮ ಅನ್ಯಾಯ. ಎಲ್ಲಿಯವರೋ ಬಂದು ಇಲ್ಲಿಂದ ಸ್ಪರ್ಧಿಸಿ ಗೆದ್ದರೆ ಕ್ಷೇತ್ರದ ಜನರ ಕಷ್ಟ-ಸುಖ ಕೇಳುತ್ತಾರಾ. ಸ್ಥಳೀಯರಿಗೆ ಟಿಕೆಟ್ ಕೊಡಿ ಎನ್ನುವುದು ಎಲ್ಲರ ಒಕ್ಕೊರಲ ಅಭಿಪ್ರಾಯ. ಟಿಕೆಟ್ ಸಿಗಲಿಲ್ಲವೆಂದು ಬೇಸರ ಪಟ್ಟುಕೊಳ್ಳುವುದು ಬೇಡ. ಪಕ್ಷೇತರರಾಗಿ ಸ್ಪರ್ಧಿಸಿ ಗೆಲ್ಲಿಸಿಕೊಂಡು ಬರುವುದು ನಮ್ಮ ಜವಾಬ್ದಾರಿ ಎಂದು ಸಭೆಯಲ್ಲಿ ಸಲಹೆ ನೀಡಿದರು.

ಭರಮಸಾಗರದ ತೀರ್ಥಪ್ಪ, ದೇವರಾಜ್ ಚಿತ್ರಹಳ್ಳಿ, ಹೊಳಲ್ಕೆರೆ ಮಂಡಲ ಅಧ್ಯಕ್ಷ ಸಿದ್ದೇಶ್, ಭರಮಸಾಗರ ಮಂಡಲ ಅಧ್ಯಕ್ಷ ಶೈಲೇಶ್, ಭೋವಿ ಸಮಾಜದ ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ, ಬಿಜೆಪಿ.ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ವೆಂಕಟೇಶ್ ಯಾದವ್ ಇವರುಗಳು ಮಾತನಾಡಿದರು.

ಡಿ.ಸಿ.ಮೋಹನ್, ದೊರೆಸ್ವಾಮಿ, ನುಲೇನೂರು ಈಶಣ್ಣ, ರುದ್ರಪ್ಪ, ಕೋಗುಂಡೆ ಮಂಜಣ್ಣ, ಚಂದ್ರಶೇಖರ್, ತಿಮ್ಮಣ್ಣ, ರತ್ನಮ್ಮ, ನಂದೀಶ್, ನಗರಸಭೆ ಸದಸ್ಯ ಶಶಿಧರ್, ಮಾಜಿ ಸದಸ್ಯರುಗಳಾದ ಈ.ಮಂಜುನಾಥ್, ರವಿಶಂಕರ್‌ಬಾಬು, ವೆಂಕಟಪ್ಪ, ರಾಮಗಿರಿ ಕುಮಾರಣ್ಣ, ಅಶೋಕ, ಅಂಕಳಪ್ಪ, ಪ್ರಕಾಶ್, ಬಿ.ಎಂ.ಶ್ರೀನಿವಾಸ್, ಮುರುಗೇಶ್ ಇವರುಗಳು ವೇದಿಕೆಯಲ್ಲಿದ್ದರು.

ಫಾಸ್ಟ್ ನ್ಯೂಸ್

## ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪ ನಾಯಕನಹಟ್ಟಿ ದೇವಸ್ಥಾನಕ್ಕೆ ಭೇಟಿ



» **ಚಳ್ಳಕೆರೆ**

ಪ್ರಸ್ತುತ 2024ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಬಿ.ಎನ್.ಚಂದ್ರಪ್ಪ ಲೋಕಸಭಾ ಚುನಾವಣೆಗೆ ಸ್ಪರ್ಧಿಸುತ್ತಿದ್ದು, ಟಿಕೆಟ್ ಘೋಷಣೆಯಾದ ನಂತರ ಮೊದಲ ಬಾರಿಗೆ ಅವರು ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ಆಶೀರ್ವಾದ ಪಡೆಯುವ ಮೂಲಕ ಲೋಕಸಭಾ ಚುನಾವಣಾ ರಂಗಪ್ರವೇಶ ಮಾಡಿದರು. ಕೆಪಿಸಿಸಿ ಕಾರ್ಯಾಧ್ಯಕ್ಷನಾಗಿ ಕಳೆದ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದು, 2014ರಲ್ಲೇ ಈ ಕ್ಷೇತ್ರದಿಂದ ಆಯ್ಕೆಯಾದ ನಂತರ 2019ರಲ್ಲಿ ಮತ್ತೊಮ್ಮೆ ಪಕ್ಷ ನನಗೆ ಈ ಕ್ಷೇತ್ರದಲ್ಲಿ ಅವಕಾಶ ನೀಡಿತ್ತು. ಆದರೆ, ಆಸಂದರ್ಭದಲ್ಲಿ ನಾನಾ ಕಾರಣಗಳಿಂದ ನಾನು ಹಿನ್ನಡೆ ಅನುಭವಿಸಬೇಕಾಯಿತು. ಮತ್ತೊಮ್ಮೆ 2024ರ ಲೋಕಸಭಾ ಚುನಾವಣೆಯಲ್ಲಿ ಮೂರನೇ ಬಾರಿಗೆ ನನ್ನ ಮೇಲೆ ಪಕ್ಷ ವಿಶ್ವಾಸವಿಟ್ಟು ಅವಕಾಶ ನೀಡಿದೆ. ಪಕ್ಷದ ಸಾವಿರಾರು ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳ ಶುಭಹಾರೈಕೆಯಲ್ಲದೆ ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರಸ್ವಾಮಿಯ ಆಶೀರ್ವಾದವನ್ನು ನಾನು ಪಡೆದಿದ್ದೇನೆ, ಕಳೆದ ಸುಮಾರು 10 ತಿಂಗಳಿಂದ ರಾಜ್ಯದಲ್ಲಿ ನಮ್ಮ ಸರ್ಕಾರ ಐದು ಪ್ರಮುಖ ಗ್ಯಾರಂಟಿಗಳನ್ನು ಜನರಿಗೆ ನೀಡುವ ಮೂಲಕ ಜನರ ವಿಶ್ವಾಸ ಗೆದ್ದಿದೆ. ಈ ವಿಶ್ವಾಸವೇ ನಮಗೆ ಈ ಬಾರಿಯ ಚುನಾವಣೆಯಲ್ಲಿ ಮತಗಳಾಗಿ ಪರಿವರ್ತನೆಯಾಗಲಿವೆ. ಈ ಬಾರಿ ಈ ಕ್ಷೇತ್ರದಿಂದ ಗೆಲುವು ಸಾಧಿಸುವ ಆತ್ಮವಿಶ್ವಾಸ ನನಗಿದೆ ಎಂದರು.ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ದ್ರಾಕ್ಷಿ ಹಾಗೂ ವೈನ್ ನಿಗಮ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್‌ಬಾಬು, ನಾಗೇಶ್‌ರೆಡ್ಡಿ, ಸಿ.ವಿ.ಮೋಹನ್, ಕಿಸಾನ್‌ಸೆಲ್ ಜಿಲ್ಲಾಧ್ಯಕ್ಷ ನಾಗರಾಜು, ಗೌರಸಮುದ್ರ ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ ಮುಂತಾದವರು ಉಪಸ್ಥಿತರಿದ್ದರು.

## ಕುಡಿಯುವ ನೀರಿಗೆ ಕೊರತೆ ಎಲ್ಲೂ ಉಂಟಾಗದಂತೆ ಹೆಚ್ಚು ಜಾಗ್ರತೆ ವಹಿಸಿ

» **ಚಳ್ಳಕೆರೆ**

ಗ್ರಾಮೀಣ ಭಾಗಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ಎಚ್ಚರಿಕೆ ವಹಿಸಿ, ಈಗಾಗಲೇ ಬೇಸಿಗೆಯ ಉರಿಬಿಸಿಲು ನೀರಿನ ದಾಹವನ್ನು ದಿನದಿಂದ ದಿನಕ್ಕೆ ಹೆಚ್ಚಿಸುತ್ತಿದೆ. ಮನುಷ್ಯರು, ಪ್ರಾಣಿಗಳು ಸೇರಿದಂತೆ ಎಲ್ಲರಿಗೂ ಕುಡಿಯುವ ನೀರಿನ ತೊಂದರೆ ಉಂಟಾಗಬಹುದು. ಈ ನಿಟ್ಟಿನಲ್ಲಿ ಗ್ರಾಮೀಣ ಕುಡಿಯುವ ನೀರು ವಿಭಾಗದ ಅಧಿಕಾರಿಗಳು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಜಾಗ್ರತೆ ವಹಿಸಬೇಕೆಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಲಕ್ಷ್ಮಣ್ ತಿಳಿಸಿದರು. ಅವರು, ಬುಧವಾರ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ತುರ್ತು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ತಾಲ್ಲೂಕಿನ ಒಟ್ಟು 40 ಗ್ರಾಮ ಪಂಚಾಯಿತಿ ವ್ಯಾಪ್ತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದು, ಕುಡಿಯುವ ನೀರಿನ ನೈರ್ಮಲ್ಯತೆಯ ಬಗ್ಗೆ ಮಾಹಿತಿ ನೀಡಿದರು.

ಗ್ರಾಮೀಣ ಕುಡಿಯುವ ನೀರು ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ದಯಾನಂದ ಮಾಹಿತಿ ನೀಡಿ, ಕಳೆದ ಬಾರಿ ಸಭೆಯ ನಿರ್ಣಯದಂತೆ ಈಗಾಗಲೇ ತಾಲ್ಲೂಕಿನಾದ್ಯಂತ 6500 ಮೀಟರ್ ಹೊಸ ಪೈಪ್ ಲೈನ್ ಕಾಮಗಾರಿಗೆ ಹಿರಿಯ ಅಧಿಕಾರಿಗಳಿಗೆ ವರದಿ ನೀಡಿದ್ದು ಶೀಘ್ರದಲ್ಲೇ ಕಾಮಗಾರಿ ಆರಂಭವಾಗಲಿದೆ ಎಂದರು. ಏಳು ಗ್ರಾಮಗಳಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗಿದೆ. ಖಾಸಗಿ ಕೊಳವೆಬಾವಿಗಳನ್ನು ಬಾಡಿಗೆ ಪಡೆದು ನೀರು ಪೂರೈಸಲಾಗುತ್ತಿದೆ. ಇನ್ನು 21 ರೀ ಬೋರ್‌ಗಳ ಕಾಮಗಾರಿ ಕೈಗೆತ್ತಿಕೊಳ್ಳಬೇಕಿದೆ ಎಂದರು. ಎಲ್ಲಾ ತಾಲ್ಲೂಕು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಕೂಲಿಕಾರರು ಕೆಲಸಕ್ಕೆ ಬೇಡಿಕೆ ಸಲ್ಲಿಸಿದರೆ ಅದನ್ನು ಕೂಡಲೇ ಪರಿಗಣಿಸುವಂತೆ ಸೂಚನೆ ನೀಡಲಾಯಿತು. ಸಭೆಯಲ್ಲಿ ಬೆಸ್ಕಾಂ ಎಇಇ ರಾಜು, ಸಂತೋಷ್‌ಕುಮಾರ್, ಸಂದೀಪ್ ಮುಂತಾದವರು ಉಪಸ್ಥಿತರಿದ್ದರು.

## ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕೆ: 268 ವಿದ್ಯಾರ್ಥಿಗಳು ಗೈರು

» **ಚಿತ್ರದುರ್ಗ**

ಮಾರ್ಚ್ 27ರಂದು ನಡೆದ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯ ಸಮಾಜ ವಿಜ್ಞಾನ ವಿಷಯದ ಪರೀಕ್ಷೆಗೆ ಒಟ್ಟು 22026 ವಿದ್ಯಾರ್ಥಿಗಳು ಹಾಜರಾಗಿದ್ದು, 268 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಜಿಲ್ಲೆಯಲ್ಲಿ ಸಮಾಜ ವಿಜ್ಞಾನ ವಿಷಯದ ಪರೀಕ್ಷೆಗೆ 22294 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದರು.

**ಶ್ರೀಮತಿ ಪ್ರಾಜಕ್ತ ಪಿ.ಠಾಕೂರ್, ವೆಚ್ಚ ವೀಕ್ಷಕರು, ಚಿತ್ರದುರ್ಗ ಲೋಕಸಭಾ ಕ್ಷೇತ್ರ**

# ಚುನಾವಣಾ ಆಯೋಗದ ನಿರ್ದೇಶನದಂತೆ ಕಾರ್ಯನಿರ್ವಹಿಸಲು ಅಧಿಕಾರಿಗಳಿಗೆ ಸೂಚನೆ




» **ಚಿತ್ರದುರ್ಗ**

ಚಿತ್ರದುರ್ಗ ಲೋಕಸಭಾ ಚುನಾವಣಾ ಕಾರ್ಯ ಹಾಗೂ ವ್ಯವಸ್ಥಿತ ನಿರ್ವಹಣೆಗಾಗಿ ನೇಮಕಗೊಂಡಿರುವ ವಿವಿಧ ಇಲಾಖೆಗಳ ಅಧಿಕಾರಿ-ಸಿಬ್ಬಂಧಿಗಳು ತಮ್ಮ ಜವಾಬ್ದಾರಿಯರಿತು, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಕಾರ್ಯನಿರ್ವಹಿಸುವಂತೆ ವೆಚ್ಚ ವೀಕ್ಷಕರಾಗಿರುವ ಶ್ರೀಮತಿ ಪ್ರಾಜಕ್ತ ಪಿ.ಠಾಕೂರ್ ಅವರು ಹೇಳಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಎಲ್ಲಾ ಸಮಿತಿಗಳ ನೋಡಲ್ ಅಧಿಕಾರಿಗಳು, ಲೆಕ್ಕಪತ್ರ ನಿರ್ವಾಹಕ ಅಧಿಕಾರಿಗಳು ಮತ್ತು ಸಿಬ್ಬಂಧಿಗಳೊಂದಿಗೆ ಸಮಾಲೋಚನೆ ನಡೆಸಿ, ಈವರೆಗೆ ನಿರ್ವಹಿಸಿದ ಕೆಲಸ-ಕಾರ್ಯಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಹೊರಗಿನಿಂದ ಜಿಲ್ಲೆಯ ಗಡಿಯೊಳಗೆ ಬರಬಹುದಾದ ಮಾದಕ ವಸ್ತು, ಮದ್ಯ, ಮೌಲ್ಯಯುತ ಸರಕುಗಳು, ನಗದು ಸೇರಿದಂತೆ ಅಕ್ರಮ ವಹಿವಾಟಿನ ಬಗ್ಗೆ ವಿಶೇಷ ಗಮನಹರಿಸಬೇಕು. ಬ್ಯಾಂಕುಗಳಲ್ಲಿನ ಅನಿಯಮಿತ ಹಾಗೂ ಅನುಮಾನಾಸ್ಪದ ವಹಿವಾಟುಗಳ ಬಗ್ಗೆ ಸೂಕ್ಷ್ಮವಾಗಿ ಗಮನಿಸುವಂತೆ ಸೂಚಿಸಿದ ಅವರು, ಅಕ್ರಮಗಳ ನಿಯಂತ್ರಿಸುವಲ್ಲಿ ಹಗಲಿರುಳು ಕಣ್ಗಾವಲು ಇರಬೇಕು. ಅಲ್ಲದೇ ಅಧಿಕಾರಿಗಳು ಎಲ್ಲಾ ವಿಷಯಗಳಲ್ಲಿ ತಾವು ನಿರ್ವಹಿಸಿದ ಕಾರ್ಯ ಹಾಗೂ ಕೈಗೊಂಡ ಕ್ರಮಗಳ ದಾಖಲೆಗಳನ್ನು ವ್ಯವಸ್ಥಿತವಾಗಿ ನಿರ್ವಹಿಸಿ, ಸಕಾಲದಲ್ಲಿ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡುವಂತೆ ಸೂಚಿಸಿದರು.ಕ್ಷೇತ್ರದ ವ್ಯಾಪ್ತಿಯಲ್ಲಿನ ದೈನಿಕಗಳು, ಸುದ್ದಿವಾಹಿನಿಗಳು ಹಾಗೂ ಸಿಟಿ ಕೇಬಲ್ ನೆಟ್‌ವರ್ಕ್‌ಗಳಲ್ಲಿ ಪ್ರಸಾರಗೊಳ್ಳುವ ಜಾಹಿರಾತು ಹಾಗೂ ಕಾಸಿಗಾಗಿ ಸುದ್ದಿಗಳ ಮೇಲೆ ವಿಶೇಷ ಗಮನಹರಿಸಬೇಕು. ಪ್ರಕಟಗೊಳ್ಳುವ ಪ್ರಚಾರ ಸಾಮಗ್ರಿಗಳು, ಪತ್ರಿಕಾ ಜಾಹಿರಾತುಗಳ ಖರ್ಚು-ವೆಚ್ಚಗಳ ಬಗ್ಗೆಯೂ ಗಮನಹರಿಸಬೇಕು. ಸಂಬಂಧಿತ ಸಮಿತಿಗಳ ಅಧಿಕಾರಿಗಳು ಕಾಲಕಾಲಕ್ಕೆ ಇವುಗಳ ಕುರಿತು ವೆಚ್ಚನಿರ್ವಾಹಕರಿಗೆ ಮಾಹಿತಿ ನೀಡುವಂತೆ ಸೂಚಿಸಿದರು.ಸಭೆಯಲ್ಲಿ ಚುನಾವಣೆಗೆ ನಿಯೋಜಿತ ವಿವಿಧ ಸಮಿತಿಗಳ ನೋಡಲ್ ಅಧಿಕಾರಿಗಳು, ಚುನಾವಣಾ ಸಿಬ್ಬಂಧಿಗಳು ಉಪಸ್ಥಿತರಿದ್ದರು.

> ಈಗಾಗಲೇ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಶಾಂತಿಯುತ, ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಹಲವು ಸಮಿತಿಗಳನ್ನು ರಚಿಸಿ, ಮೇಲ್ವಿಚಾರಣೆಗಾಗಿ ಹಿರಿಯ ಅಧಿಕಾರಿಗಳನ್ನು ನೇಮಿಸಲಾಗಿದೆ. ಅಕ್ರಮ ತಡೆಗೆ ಜಿಲ್ಲೆಯಾದ್ಯಂತ ನಿರಂತರ ಕಣ್ಗಾವಲು ಇರಿಸಲಾಗಿದೆ. ಪೆಟ್ರೋಲ್ ಬಂಕ್, ಬ್ಯಾಂಕುಗಳಲ್ಲಿನ ಅಸಹಜವಾದ ವಹಿವಾಟು, ಜಿಲ್ಲೆಯ ಗಡಿ ಪ್ರದೇಶಗಳಲ್ಲಿನ ಸರಕು ಸಾಗಾಣಿಕೆಯನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ.
>
> » **ಟಿ.ವೆಂಕಟೇಶ್, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು, ಚಿತ್ರದುರ್ಗ.**

> ಶೇ.70ಕ್ಕಿಂತ ಕಡಿಮೆ ಮತದಾನ ನಡೆದಿರುವ ಮತಗಟ್ಟೆಗಳ ಪ್ರದೇಶದ ವ್ಯಾಪ್ತಿಯಲ್ಲಿ ಹಲವು ಜನಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಕ್ಕೆ ಕ್ರಮವಹಿಸಲಾಗಿದೆ.
>
> » **ಎಸ್.ಜೆ.ಸೋಮಶೇಖರ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ವ್ಯವಸ್ಥಿತ ಮತದಾರರ ಜಾಗೃತಿ ಮತ್ತು ಭಾಗವಹಿಸುವಿಕೆ ಕಾರ್ಯಕ್ರಮದ ಅಧ್ಯಕ್ಷರು.**

> ಜಿಲ್ಲೆಯಲ್ಲಿ ಶಾಂತಿಯುತ ಚುನಾವಣೆಗೆ ಅಗತ್ಯವಿರುವ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಅಲ್ಲದೇ ರಕ್ಷಣಾಕಾರ್ಯಕ್ಕೆ ಅಗತ್ಯ ಸಿಬ್ಬಂಧಿಗಳನ್ನು ನಿಯೋಜಿಸಲಾಗಿದೆ. ಈವರೆಗೆ ಯಾವುದೇ ಅಹಿತಕರ ಘಟನೆಗಳು ನಡೆದ ವರದಿ ಇರುವುದಿಲ್ಲ.
>
> » **ಧರ್ಮೇಂದ್ರ ಕುಮಾರ್ ಮೀನಾ, ಎಸ್‌ಪಿ**

## ಡಾ.ಪ್ರಭಾ ಮಲ್ಲಿಕಾರ್ಜುನ ಭೇಟಿ



ಚಿತ್ರದುರ್ಗ: ದಾವಣಗೆರೆ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ ಅವರು ಚಿತ್ರದುರ್ಗ ಭೋವಿಗುರುಪೀಠಕ್ಕೆ ಆಗಮಿಸಿ ಜಗದ್ಗುರು ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿರವರ ದರ್ಶನಾಶೀರ್ವಾದ ಪಡೆದರು. ಈ ಸಂಧರ್ಭದಲ್ಲಿ ದಾವಣಗೆರೆ ಜಯಣ್ಣ, ವಿನಯ ಕುಮಾರ್, ಶಿಕ್ಷಕ ಹನುಮಂತು, ಜಗಳೂರು ಅರ್ಜುನಪ್ಪ, ದೇವರಾಜ, ಹರಿಹರ ವೀರಭದ್ರಪ್ಪ, ಕುಮಾರ, ಹೊನ್ನಳ್ಳಿ ಶಿವಮೂರ್ತ್ಯಪ್ಪ, ಚನ್ನಗಿರಿ ಗರಗ ರಾಜಪ್ಪ, ಬೆಂಕಿಕೆರೆ ಹನುಮಂತಪ್ಪ, ತಾ.ಪ.ಮಾಜಿ ಅಧ್ಯಕ್ಷ ಕುಳೇನೂರು ಹನುಮಂತಪ್ಪ, ನಿವೃತ್ತ ಅಭಿಯಂತರ ಡಿ.ಕೆ. ತಿಮ್ಮಪ್ಪ, ಹಾಗೂ ಇನ್ನಿತರರು ಉಪಸ್ಥಿತಿಯಿದ್ದರು.

## ಸಹಕಾರ ಶಿಕ್ಷಣನಿಧಿ ಚೆಕ್



ಚಿತ್ರದುರ್ಗ: ಚಿತ್ರದುರ್ಗ ಟೌನ್ ಕೋ ಆಪರೇಟಿವ್ ಸೊಸೈಟಿ ನಿಯಮಿತ ಇದರ 2022- 23ನೇ ಸಾಲಿನ ಸಹಕಾರ ಶಿಕ್ಷಣನಿಧಿ ಚೆಕ್ಕನ್ನು ಸಂಘದ ಅಧ್ಯಕ ಎಂ.ನಿಶಾನಿ ಜಯಣ್ಣ ಇವರು ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ನಿಯಮಿತ ಇದರ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ನಾಗರಾಜ ಪಾಟೀಲ್ ಇವರಿಗೆ ನೀಡಿದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಸೂರ್ಯಪ್ರಕಾಶ್ ಸಿ.ಎಚ್. ಆಡಳಿತ ಮಂಡಳಿ ನಿರ್ದೇಶಕರುಗಳಾದ ಡಾ:: ರಹಮದ್ ಉಲ್ಲಾ, ಶ್ರೀನಿವಾಸಮೂರ್ತಿ ಬಿ.ವಿ. ನಾಗರಾಜ್ ರಾವ್ ಬಿ ಎಂ. ಚಿಕ್ಕಣ್ಣ. ಕೆ, ಸೈಯದ್ ಮುಜೀಬ್, ಚಂದ್ರಪ್ಪ , ಪ್ರಸನ್ನ ಎಸ್. ವಿ.ಶ್ರೀ ಪ್ರಕಾಶ್ ಹಾಜರಿದ್ದರು.

## ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸರಳವಾಗಿ ನಡೆದ ಅಗ್ನಿಬನ್ನಿರಾಯ ಜಯಂತಿ

» **ಚಳ್ಳಕೆರೆ**

ರಾಷ್ಟ್ರದ ಇತಿಹಾಸದಲ್ಲಿ 12ನೇ ಶತಮಾನ ಧಾರ್ಮಿಕ ಪರಿವರ್ತನೆಯ ಕಾಲವಾಗಿದೆ. ತದನಂತರು ಸಮಾಜದಲ್ಲಿ ಶಾಂತಿ ಮೂಡಿಸುವ ನಿಟ್ಟಿನಲ್ಲಿ ಅನೇಕ ಮಹಾನೀಯರು ತಮ್ಮದೇಯಾದ ತತ್ವ, ಸಿದ್ಧಾಂತಗಳೊಂದಿಗೆ ಜನರಲ್ಲಿ ಜಾಗೃತಿ ಮೂಡಿಸಿದ್ದಾರೆ. ಅಂತರ ಮಹಾನ್ ಶ್ರೇಷ್ಠರಲ್ಲಿ ಅಗ್ನಿಬನ್ನಿರಾಯರೂ ಒಬ್ಬರು ಎಂದು ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದರು.



ಅವರು, ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಅಗ್ನಿಬನ್ನಿರಾಯ ಜಯಂತಿಯನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಅಗ್ನಿಬನ್ನಿರಾಯ ಸಾಮಾಜಿಕ್ರಾಂತಿಯ ಹರಿಕಾರರಾಗಿದ್ದರು.

ಜನರಲ್ಲಿ ಆಳಾವಾಗಿ ಬೇರೂರಿದ್ದ ಅಸಮಾನತೆ, ಅಸ್ಪೃಶ್ಯತೆ, ದ್ವೇಷ ಮುಂತಾದ ವಿಚಾರಗಳಲ್ಲಿ ಜಾಗೃತಿ ಮೂಡಿಸಿದವರು ಎಂದರು.

ಸರ್ವೆ ಅಧಿಕಾರಿ ಬಾಬುರೆಡ್ಡಿ, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಲೆಕ್ಕಿಗ ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ಸಿ.ಟಿ.ರವಿ ಕ್ಷಮೆಯಾಚಿಸಲಿ: ಭೋವಿ ಸಮಾಜದ ಅಧ್ಯಕ್ಷ ಆಗ್ರಹ

» **ಚಿತ್ರದುರ್ಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ್ ಎಸ್.ತಂಗಡಗಿಯವರ ತಾಯಿ ಬಗ್ಗೆ ಅವಾಚ್ಯ ಹಾಗೂ ಅವಹೇಳನಕಾರಿಯಾಗಿ ಮಾತನಾಡಿರುವ ಬಿಜೆಪಿಯ ಸಿ.ಟಿ.ರವಿ ತಾಯಿಯಾದ ಭಾರತ ಮಾತೆಗೆ ಹಾಗೂ ಇಡೀ ಹೆಣ್ಣು ಕುಲಕ್ಕೆ ಅವಮಾನ ಮಾಡಿದ್ದಾರೆ. ಆದ್ದರಿಂದ ಈ ಕೂಡಲೇ ಕ್ಷಮೆ ಕೇಳಬೇಕು. ಇಲ್ಲದೇ ಹೋದರೆ ಅವರು ನಮ್ಮ ಜಿಲ್ಲೆಗೆ ಬಂದಾಗ ಕಪ್ಪು ಬಟ್ಟೆ ಪ್ರದರ್ಶಿಸಿ ಬಹಿಷ್ಕರಿಸಲಾಗುವುದು ಎಂದು ಭೋವಿ ಸಮಾಜದ ಅಧ್ಯಕ್ಷ ತಿಪ್ಪೇಸ್ವಾಮಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಯಿಗೆ ಭಾರತದಲ್ಲಿ ಪವ ಪವಿತ್ರವಾದ ಸ್ಥಾನ ಇದೆ. ತಾಯಿಯನ್ನು ಭೂತಾಯಿ, ತಾಯಿ ನಾಡು, ತಾಯಿ ಮನೆ ತಾಯಿ ಮಾತು ತಾಯಿ ನುಡಿ ಎಂದೆಲ್ಲಾ ಹೇಳಲಾಗುತ್ತಿದೆ. ಇಂತಹ ತಾಯಿಯ ಬಗ್ಗೆ ಬಿಜೆಪಿಯ ಮುಖಂಡರಾದ ಸಿ.ಟಿ.ರವಿಯವರು ಅವಾಚ್ಯ, ಅವಹೇಳನಕಾರಿಯಾಗಿ ಮಾತನಾಡಿದ್ದಾರೆ ಎಂದರು.



ರಾಜಕೀಯ ವ್ಯವಸ್ಥೆಯಲ್ಲಿ ರಾಜಕಾರಣಿಗಳು ಟೀಕೆ ಮಾಡುವುದು ಸರ್ವ ಸಾಮಾನ್ಯ, ಆರೋಪ-ಪ್ರತ್ಯಾರೋಪ ಮಾಡುವುದು ನಡೆಯುತ್ತಿರುವುದನ್ನು ಗಮನಿಸುತ್ತಿದ್ದೇವೆ. ಆದರೆ ಹೆಣ್ಣು ಸಂಕುಲವನ್ನು ಕೀಳಾಗಿ ಕಂಡು ಅವಮಾನಿಸಿ ಮಾತನಾಡಿರುವುದು ಕಾಣಲು ಸಾಧ್ಯವಿಲ್ಲ. ಶಿಸ್ತಿನ ಪಕ್ಷವೆಂದು ಹೇಳಿಕೊಂಡಿರುವ ಸಿ.ಟಿ.ರವಿ ಯವರ ಬಾಯಿಯಿಂದ ಇಂತಹ ಕೆಟ್ಟ ಪದಗಳನ್ನು ಬಳಸಿರುವುದು ಇಡೀ ಅವರ ಪಕ್ಷಕ್ಕೆ, ಅವರ ರಾಜಕೀಯ ವ್ಯಕ್ತಿತ್ವಕ್ಕೆ ಶೋಭೆ ತರುವಂತಹದ್ದಲ್ಲ ಎಂದು ತಿಳಿಸಿದರು.ಶ್ರೇಷ್ಠತೆಯನ್ನುವುದು ತಾಯಿಯಲ್ಲಿ ನೋಡಲು ಮಾತ್ರ ಸಾಧ್ಯ. ಅಂತಹ ತಾಯಿಯ ಕುರಿತು ಅವಹೇಳನ ಮಾಡಿರುವುದು ಖಂಡನೀಯ ಮತ್ತು ನಮ್ಮ ಸಂಸ್ಕೃತಿಗೆ ಮಾಡಿರುವ ಅಪಮಾನ. ತಾಯಿಯನ್ನು ಶಾರದೆಯ ರೂಪದಲ್ಲಿ ಪೂಜಿಸುವ ಪರಂಪರೆ ಭಾರತೀಯ ಪರಂಪರೆ. ಇಡೀ ಭಾರತದ ಪರಂಪರೆಗೆ ನೋವುಂಟು ಮಾಡುವಂತಹ ಮಾತುಗಳನ್ನಾಡಿದ್ದಾರೆ ಎಂದರು.

ತಾಯಿ ಶಾರದೆಯನ್ನೇ ಅವಮಾನಿಸುವ ಇವರು ಬೇರೆಯ ಸಂಸ್ಕೃತಿಗಳ ಬಗ್ಗೆ ಮತ್ಯಾವ ರೀತಿ ಚಿಂತಿಸುತ್ತಾರೆ ಎಂಬುವುದನ್ನು ಪ್ರಜ್ಞಾವಂತರು ತಿಳಿಯಬೇಕಾಗಿದೆ. ಇವರ ಚಿಂತನೆ ಸಮುದಾಯವನ್ನ ಸಂಘಟಿಸುವ ಚಿಂತನೆಯಾಗಬೇಕು. ರಾಜಕೀಯ ವ್ಯಕ್ತಿಗಳನ್ನ ಟೀಕಿಸುವಾಗ ಕುಟುಂಬದ ತಾಯಂದಿರನ್ನ ಬೀದಿಗೆ ತರುವಂತಹ ಹೊಲಸು ಮನಸ್ಸಿನ ರಾಜಕಾರಣಿಗಳನ್ನ ಖಂಡಿಸುತ್ತೇವೆ ಎಂದು ತಿಳಿಸಿದ್ದಾರೆ.

ಜಿಲ್ಲಾ ಭೋವಿ ಸಮಾಜದ ಖಜಾಂಚಿ ಈ.ಮಂಜುನಾಥ್ ಮಾತನಾಡಿ, ಜಗತ್ತಿನಲ್ಲಿ ಕೆಟ್ಟ ಮಕ್ಕಳು ಇರುತ್ತಾರೆ. ಆದರೆ ಕೆಟ್ಟ ತಾಯಿ ಇರಲು ಸಾಧ್ಯವಿಲ್ಲ ಭಾರತಾಂಭೆಯನ್ನು ಅವಮಾನಿಸಿರುವ ಹೀನಾ ಮನಸ್ಥಿತಿಯ ವಿಕೃತ ಆಲೋಚನೆಯ ಸಿ.ಟಿ.ರವಿ ಯವರನ್ನು ಗಡಿಪಾರು ಮಾಡುವುದಕ್ಕಿಂತ ದೇಶದ ಗಡಿಯನ್ನೇ ದಾಟಿಸುವುದು ಉತ್ತಮ. ಇವರಿಗೆ ಈ ಪಾಠ ಕಲಿಸಿದರೆ ಮುಂದೆ ತಾಯಿಯ, ಭೂತಾಯಿಯ, ಮಾತೆಯ ವಿರುದ್ಧ ಮಾತನಾಡುವ ವ್ಯಕ್ತಿಗಳು ಎಚ್ಚರವಹಿಸುತ್ತಾರೆ ಎಂದರು.

ತಾಯಿ ದೇವತೆಯಾಗಬಹುದು, ಆದರೆ ದೇವರು ತಾಯಿಯಾಗಲಾರಳು. ಅದಕ್ಕಾಗಿ ತಾಯಿಗಿಂತ ದೊಡ್ಡ ದೇವರಿಲ್ಲ ಎಂಬ ಮಾತನ್ನು ಸಿ.ಟಿ.ರವಿಯವರು ಓದಿದಂತಿಲ್ಲ. ರವಿಯವರು ಈ ಕೂಡಲೇ ತಾಯಿಯ ಬಗ್ಗೆ ವಿವೇಶ ಬಳಸಿಕೊಳ್ಳಲಿ. ಈ ಕೂಡಲೇ ತಾಯಿಯಾದ ಭಾರತ ಮಾತೆಗೆ ಹಾಗೂ ಇಡೀ ಹೆಣ್ಣು ಕುಲಕ್ಕೆ ಕೂಡಲೇ ಕ್ಷಮೆ ಕೇಳಬೇಕು. ಇಲ್ಲದೇ ಹೋದರೆ ಅವರು ನಮ್ಮ ಜಿಲ್ಲೆಗೆ ಬಂದಾಗ ಕಪ್ಪು ಬಟ್ಟೆ ಪ್ರದರ್ಶಿಸಿ ಬಹಿಷ್ಕರಿಸಲಾಗುವುದು ಎಂದು ಎಚ್ಚರಿಸಿದ್ದಾರೆ. ಗೋಷ್ಠಿಯಲ್ಲಿ ಜಿಲ್ಲಾ ಭೋವಿ ಸಮಾಜದ ಖಂಜಾಚಿ ಲಕ್ಷ್ಮಣ್, ಮುಖಂಡರಾದ ಗೋಡೆಮನೆ ಹನುಮಂತಪ್ಪ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ದಕ್ಷತೆಯಿಂದ ಕಾರ್ಯನಿರ್ವಹಿಸಿದರೆ ಮಾತ್ರ ಸಹಕಾರ ಅಭಿವೃದ್ಧಿ



» **ಚಳ್ಳಕೆರೆ**

ಸಹಕಾರ ಕ್ಷೇತ್ರದಲ್ಲಿ ಯಾವುದೇ ಹಂತದಲ್ಲೂ ನಂಬಿಕೆ, ವಿಶ್ವಾಸಕ್ಕೆ ಚ್ಯುತಿಬಾರದಂತೆ ಎಚ್ಚರಿಕೆ ವಹಿಸಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ಹಂತದ ಚುನಾಯಿತ ಜನಪ್ರತಿನಿಧಿಯಾಗಲಿ, ಅಧಿಕಾರಿಗಳಾಗಲಿ ವಾಸ್ತಾಂಶಕ್ಕೆ ಒತ್ತು ನೀಡಬೇಕು. ಸಹಕಾರ ಕ್ಷೇತ್ರದ ತತ್ವವನ್ನು ಇಡೀ ಕಾರ್ಯಕ್ಷೇತ್ರದಲ್ಲಿ ಅಳವಡಿಸಿಕೊಂಡರೆ ಮಾತ್ರ ಸಹಕಾರಿ ಕ್ಷೇತ್ರವನ್ನು ಮತ್ತಷ್ಟು ಎತ್ತರಕ್ಕೆ ಒಯ್ಯಲು ಸಾಧ್ಯವಾಗುತ್ತದೆ ಎಂದು ಸಹಕಾರಿ ರತ್ನಪ್ರಶಸ್ತಿ ವಿಜೇತ, ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಜಂಕಲ್ ಬಸವರಾಜು ತಿಳಿಸಿದರು. ಅವರು, ನಗರದ ಶ್ರೀಕೃಷ್ಣ ಹಾಸ್ಟಲ್ ಆವರಣದಲ್ಲಿ ಜಿಲ್ಲಾ ಮಟ್ಟದ ಸಹಕಾರ ಇಲಾಖೆಯ ಪ್ರಾಥಮಿಕ ಸಂಘಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ಜಿಲ್ಲಾ ಸಹಕಾರಿಯೂನಿಯನ್, ಕರ್ನಾಟಕ ರಾಜ್ಯ ಸರ್ಕಾರ ಮಹಾಮಂಡಳ ನಿಯಮಿತ ಇದರ ಸಹಯೋಗದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಸಹಕಾರಿ ಯೂನಿಯನ್‌ನ ಮಾಜಿ ಉಪಾಧ್ಯಕ್ಷ ಮಾತೃಶ್ರೀ ಎನ್.ಮಂಜುನಾಥ ಮಾತನಾಡಿ, ಸಹಕಾರ ಕ್ಷೇತ್ರದಲ್ಲಿ ಉತ್ತಮ ಅನುಭವನವುಳ್ಳಂತಹ ಅನೇಕ ಹಿರಿಯರು ಇದ್ದಾರೆ. ಸಹಕಾರಿ ಯೂನಿಯನ್‌ನ್ನು ಇನ್ನು ಹೆಚ್ಚು ಬಲಗೊಳಿಸಬೇಕಿದೆ. ಸಹಕಾರಿ ಕ್ಷೇತ್ರದ ಸರ್ವತೋಮುಖ ಅಭಿವೃದ್ದಿಗಾಗಿ ಪ್ರಾಮಾಣಿಕ ಸೇವೆ ಸಲ್ಲಿಸುವ ಸಂಕಲ್ಪವನ್ನು ನಾವೆಲ್ಲರೂ ಮಾಡೋಣವೆಂದರು. ಕಾರ್ಯಕ್ರಮದಲ್ಲಿ ಉಪನಿರ್ದೇಶಕ ಕೆ.ಮಹೇಶ್ವರಪ್ಪ, ಸಹಾಯಕ ನಿರ್ದೇಶಕ ಎನ್.ಪಿ.ಜಯಪ್ರಕಾಶ್, ದೀಪಕ್, ದಾದಾವಲಿ ಮುಂತಾದವರು ಉಪಸ್ಥಿತರಿದ್ದರು.

### ರಾಷ್ಟ್ರೀಯ ಹೆದ್ದಾರಿ ತಳಕು ಬಳಿ ಟಯರ್ ಸಿಡಿದು ಕ್ರೂಸರ್ ವಾಹನ ಪಲ್ಟಿ; ಓರ್ವ ಸಾವು: 10ಕ್ಕೂ ಹೆಚ್ಚು ಜನರಿಗೆ ಗಾಯ

» **ಚಳ್ಳಕೆರೆ**

ತಾಲ್ಲೂಕಿನ ತಳಕು ಪೋಲೀಸ್ ಠಾಣಾ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿ 150(ಎ)ನ ಹೊಸಹಳ್ಳಿ ಕ್ರಾಸ್‌ಬಳಿ ಬಳ್ಳಾರಿಯಿಂದ ಬರುತ್ತಿದ್ದ ಕ್ರೂಸರ್ ವಾಹನದ ಹಿಂಭಾಗದ ಟಯರ್ ಸಿಡಿದು ಕ್ರೂಸರ್ ವಾಹನ ಪಲ್ಟಿಯಾಗಿ ವಾಹನದಲ್ಲಿದ್ದ ರಮೇಶ್(48) ಎಂಬ ವ್ಯಕ್ತಿ ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ಕ್ರೂಸರ್ ವಾಹನ ಚಳ್ಳಕೆರೆ ಕಡೆಗೆ ರಭಸವಾಗಿ ಬರುತ್ತಿದ್ದು ಟಯರ್ ಸಿಡಿದ ಕಾರಣ ವಾಹನ ಪಲ್ಟಿಯಾಗಿದೆ. ವಾಹನದಲ್ಲಿದ್ದ ಸುಮಾರು 10ಕ್ಕೂ ಹೆಚ್ಚು ಜನರಿಗೆ ಗಾಯಗಳಾಗಿದ್ದು, ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿದ ನಂತರ ಚಿತ್ರದುರ್ಗ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸ್ಥಳಕ್ಕೆ ಹೆಚ್ಚುವರಿ ರಕ್ಷಣಾಧಿಕಾರಿ ಕುಮಾರಸ್ವಾಮಿ, ಡಿವೈಎಸ್ಪಿ ರಾಜಣ್ಣ, ಪಿಎಸ್‌ಐ ಅಶ್ವಿನಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ತಳಕು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

### ನೀತಿ ಸಂಹಿತೆ: 181 ಪ್ರಕರಣ, ರೂ.1.12 ಕೋಟಿಗೂ ಮದ್ಯ ವಶ

» **ಚಿತ್ರದುರ್ಗ**

ಸಾರ್ವತ್ರಿಕ ಲೋಕಸಭಾ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿಯಾದ ಮಾರ್ಚ್ 16 ರಿಂದ ಮಾರ್ಚ್ 26 ರವರೆಗೆ ಚಿತ್ರದುರ್ಗ ಜಿಲ್ಲೆಯಲ್ಲಿ ಅಬಕಾರಿ ಇಲಾಖೆಯು ಜಾರಿ ಮತ್ತು ತನಿಖಾ ಕಾರ್ಯ ತೀವ್ರಗೊಳಿಸಿದೆ. ಈ ಅವಧಿಯಲ್ಲಿ ಜಿಲ್ಲೆಯಾದ್ಯಂತ ರೂ.1.12 ಕೋಟಿಗೂ ಅಧಿಕ ಮೌಲ್ಯದ 22,360 ಲೀಟರ್ ಮದ್ಯ ವಶಪಡಿಸಿಕೊಂಡಿದ್ದಾರೆ. ಈ ಸಂಬಂಧವಾಗಿ 181 ಪ್ರಕರಣ ದಾಖಲಿಸಲಾಗಿದೆ ಎಂದು ಅಬಕಾರಿ ಉಪ ಆಯುಕ್ತ ಡಾ.ಬಿ.ಮಾದೇಶ್ ಮಾಹಿತಿ ನೀಡಿದ್ದಾರೆ. ಚಳ್ಳಕೆರೆ ಹಾಗೂ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಹೆಚ್ಚಿನ ಮೌಲ್ಯದ ಮದ್ಯ ಜಪ್ತು ಮಾಡಲಾಗಿದೆ. ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೂ.59,26,238 ಮೌಲ್ಯದ 14,741 ಲೀಟರ್ ಅಕ್ರಮ ಮದ್ಯ ಹಾಗೂ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ರೂ.52,32,166 ಮೌಲ್ಯದ 7,440 ಲೀಟರ್ ಅಕ್ರಮ ಮದ್ಯ ವಶಪಡಿಸಿಕೊಳ್ಳಲಾಗಿದೆ.

ಉಳಿದಂತೆ ಮೊಳಕಾಲ್ಮೂರು ಕ್ಷೇತ್ರ ವ್ಯಾಪ್ತಿಯಲ್ಲಿ ರೂ.11,089 ಮೌಲ್ಯದ 30 ಲೀಟರ್ ಮದ್ಯ, ಹಿರಿಯೂರು ಕ್ಷೇತ್ರ ವ್ಯಾಪ್ತಿಯಲ್ಲಿ ರೂ. 34,049 ಮೌಲ್ಯದ 76 ಲೀಟರ್ ಮದ್ಯ, ಹೊಸದುರ್ಗ ಕ್ಷೇತ್ರ ವ್ಯಾಪ್ತಿಯಲ್ಲಿ ರೂ.17,956 ಮೌಲ್ಯದ 39 ಲೀಟರ್ ಮದ್ಯ, ಹೊಳಲ್ಕೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ರೂ.15,551 ಮೌಲ್ಯದ 34 ಲೀಟರ್ ಮದ್ಯ ವಶಪಡಿಸಿಕೊಂಡಿದ್ದಾರೆ.

**ಕ್ಷಯರೋಗ ಕುರಿತು ಜನಜಾಗೃತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ**

# ಹೌದು ನಾವು ಕ್ಷಯರೋಗ ಕೊನೆಗೊಳಿಸಬಹುದು

» **ಚಿತ್ರದುರ್ಗ**

ವೈದ್ಯರ ಸಲಹೆಯಂತೆ ಚಿಕಿತ್ಸೆ ಸರಿಯಾದ ಕ್ರಮದಲ್ಲಿ ಪಡೆದರೆ ಕ್ಷಯ ರೋಗವನ್ನು ಸಂಪೂರ್ಣವಾಗಿ ಗುಣಪಡಿಸಬಹುದಲ್ಲದೆ ಕ್ಷಯ ರೋಗವನ್ನು ನಾವು ಜಿಲ್ಲೆಯಿಂದ ಕೊನೆಗೊಳಿಸಬಹುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ವಿಶ್ವ ಕ್ಷಯರೋಗ ದಿನದ ಅಂಗವಾಗಿ ಕ್ಷಯರೋಗ ಕುರಿತು ಜನಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆರೋಗ್ಯ ಇಲಾಖೆಯ ವೈದ್ಯರು ಸೇರಿದಂತೆ ಎಲ್ಲಾ ವಿವಿಧ ವೃಂದದ ಅಧಿಕಾರಿಗಳು ಮತ್ತು ಕಾರ್ಯಕರ್ತರು ನಗರಗಳ ವಾರ್ಡ್‌ಗಳಲ್ಲಿ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಜನರಲ್ಲಿ ಕ್ಷಯರೋಗ ಕುರಿತು ಅರಿವು ಮೂಡಿಸುತ್ತ ಸೂಕ್ಷ್ಮ ಹಂತದಲ್ಲಿ ಕ್ಷಯ ರೋಗ ಪತ್ತೆ ಹಚ್ಚಿ ಸರಿಯಾದ ಚಿಕಿತ್ಸೆ ನೀಡುವುದರ ಮುಖಾಂತರ ಎಲ್ಲರೂ ಒಟ್ಟಾಗಿ ಕ್ಷಯರೋಗ ಕೊನೆಗೊಳಿಸಬಹುದು ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಜಿ.ಪಿ. ರೇಣುಪ್ರಸಾದ್ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಕೂಡ ವಿಶ್ವ ಕ್ಷಯರೋಗ ದಿನವನ್ನ ಆಚರಿಸಲಾಗುತ್ತಿದ್ದು, ರೋಗಿಗಳನ್ನ ಶೀಘ್ರ ಪತ್ತೆ ಹಚ್ಚಿ ತ್ವರಿತ ಚಿಕಿತ್ಸೆ ಮುಖಾಂತರ 2025ಕ್ಕೆ ಕ್ಷಯ ರೋಗವನ್ನು ಜಿಲ್ಲೆಯಿಂದ, ರಾಜ್ಯದಿಂದ ಹೊಡೆದೋಡಿಸೋಣ ಎಂದರು.

ಚಿಕಿತ್ಸೆ ನೀಡುವ ಮುನ್ನ ರೋಗಿಗೆ ಸರಿಯಾದ ಆರೋಗ್ಯ ಶಿಕ್ಷಣ ನೀಡಿ ರೋಗಿಯು ಮಧ್ಯದಲ್ಲಿ ಚಿಕಿತ್ಸೆ ನಿಲ್ಲಿಸದಂತೆ ಮಾಹಿತಿ ನೀಡಬೇಕು. ಒಂದು ವೇಳೆ ರೋಗಿಯು ಕಾರಣಾಂತರದಿಂದ ಚಿಕಿತ್ಸೆಯನ್ನು ಮಧ್ಯದಲ್ಲಿ ನಿಲ್ಲಿಸಿದರೆ ಅಥವಾ ಡೀಫಾಲ್ಟರ್ ಆದರೆ ರೋಗಾಣುಗಳ ಸಂಖ್ಯೆ ರೋಗಿಯ ದೇಹದಲ್ಲಿ ಹೆಚ್ಚಾಗಿ ಎಂಡಿಆರ್ ಟಿಬಿ ಆಗುವ ಸಾಧ್ಯತೆ ಇದೆ. ಎಂಡಿಆರ್ ಟಿಬಿ ಚಿಕಿತ್ಸಾ ಅವಧಿ 9 ರಿಂದ 11 ತಿಂಗಳು ಇದ್ದು, ಎಂಡಿಆರ್ ನಲ್ಲಿ ಸಾವಿನ ಪ್ರಮಾಣ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಡೀಫಾಲ್ಟರ್ ಆಗದಂತೆ ಚಿಕಿತ್ಸೆ ನೀಡುವ ವೈದ್ಯರು ಮತ್ತು ಕಾರ್ಯಕರ್ತರು ನಿಗಾ ವಹಿಸಬೇಕೆಂದು ತಿಳಿಸಿದರು.

ಚಿತ್ರದುರ್ಗ ತಾಲ್ಲೂಕಿನಲ್ಲಿ 256, ಹೊಳಲ್ಕೆರೆ 98, ಹೊಸದುರ್ಗ 92, ಹಿರಿಯೂರು 160, ಚಳ್ಳಕೆರೆ 292, ಮೊಳಕಾಲ್ಮೂರು 147 ಸೇರಿದಂತೆ ಜಿಲ್ಲೆಯಲ್ಲಿ 1016 ಜನ ಕ್ಷಯ ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಿ ರೋಗ ಹರಡದಂತೆ ರೋಗಿಗಳು ಸಹಕರಿಸಬೇಕು ಎಂದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸಿ.ಓ.ಸುಧಾ ಮಾತನಾಡಿ, ಕ್ಷಯ ರೋಗವು ಮೈಕೋ ಬ್ಯಾಕ್ಟೀರಿಯಾ ಟ್ಯೂಬರ್ ಕ್ಯುಲೋಸಿಸ್ ಎಂಬ ಸೂಕ್ಷ್ಮಾಣು ಜೀವಿಯಿಂದ ಬರುವ ಕಾಯಿಲೆಯಾಗಿದ್ದು, ಪ್ರಾಚೀನ ಕಾಲದಿಂದಲೂ ಕಾಡುತ್ತಾ ಬಂದಿದೆ. ಮಾರ್ಚ್ 24, 1882ರಲ್ಲಿ ಜರ್ಮನ್ ದೇಶದ ರಾಬರ್ಟ್ ಕಾಕ್ ಎಂಬ ವಿಜ್ಞಾನಿ ಕ್ಷಯರೋಗಕ್ಕೆ ಕಾರಣವಾದ ರೋಗಾಣುಗಳನ್ನು ಕಂಡು ಹಿಡಿದರು ಅವರ ಸ್ಮರಣಾರ್ಥ ಪ್ರತಿ ವರ್ಷ ವಿಶ್ವ ಕ್ಷಯರೋಗ ದಿನಾಚರಣೆಯನ್ನು ಆಚರಿಸಲಾಗುತ್ತದೆ ಎಂದರು.

ಭಾರತದಲ್ಲಿ ಪ್ರತಿದಿನ 60000 ಜನಕ್ಕೆ ಕ್ಷಯರೋಗದ ಸೋಂಕು ತಗುಲುತ್ತಿದ್ದು, 6,000ಕ್ಕೂ ಹೆಚ್ಚು ಜನ ಕ್ಷಯರೋಗ ಪೀಡಿತರಾಗುತ್ತಾರೆ 600 ಜನ ಕ್ಷಯರೋಗದಿಂದ ಮರಣ ಹೊಂದುತ್ತಿದ್ದು, ಪ್ರತಿ ಮೂರು ನಿಮಿಷಕ್ಕೆ ಇಬ್ಬರು ಕ್ಷಯ ರೋಗಿಗಳು ಮರಣ ಹೊಂದುತ್ತಿರುವುದು ವಿಷಾದನೀಯ. ಅತ್ಯಾಧುನಿಕ ವಿಧಾನದಿಂದ ಶೇ.99 ರಷ್ಟು ಕರಾರುವಕ್ಕಾದ ಫಲಿತಾಂಶ ನೀಡುವ ಯಂತ್ರಗಳು ಚಿತ್ರದುರ್ಗ ಮತ್ತು ಚಳ್ಳಕೆರೆಯಲ್ಲಿ ಹಾಗೂ ಟ್ರೂ ನಾಟ್ ಯಂತ್ರಗಳು ಮೊಳಕಾಲ್ಮೂರು ಮತ್ತು ಹೊಳಲ್ಕೆರೆಯಲ್ಲಿ ಇದ್ದು, ಕ್ಷಯ ಮತ್ತು ಬಹು ಔಷಧಿ ಪ್ರತಿರೋಧ ಕ್ಷಯಪತ್ತೆ ಹಚ್ಚುವ ಸೌಲಭ್ಯ ಒದಗಿಸಲಾಗಿದೆ. ಇದರ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಮಾತನಾಡಿ, ಕ್ಷಯ ರೋಗಕ್ಕೆ ಉಚಿತವಾಗಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ಸೌಲಭ್ಯ ಇರುವುದರಿಂದ ಎರಡು ವಾರಕ್ಕಿಂತ ಹೆಚ್ಚು ಕೆಮ್ಮು, ಕಫ, ಕಫದಲ್ಲಿ ರಕ್ತ ಬೀಳುವುದು, ಸತತ ಎದೆ ನೋವು ಇಂತಹ ಲಕ್ಷಣಗಳು ಕಂಡು ಬಂದಲ್ಲಿ ತುರ್ತಾಗಿ ಯಾವುದೇ ಸರ್ಕಾರಿ ಆಸ್ಪತ್ರೆಗಳಲ್ಲಿ ಕಫ ಪರೀಕ್ಷೆ ಮಾಡಿಸುವುದರ ಮುಖಾಂತರ ಕ್ಷಯರೋಗವನ್ನು ಬೇಗ ಪತ್ತೆ ಹಚ್ಚಿ ಚಿಕಿತ್ಸೆಗೆ ಒಳಪಡಿಸಿ ರೋಗವನ್ನು ಸಂಪೂರ್ಣವಾಗಿ ತಡೆಯಲು ಸರ್ವರೂ ಶ್ರಮಿಸಬೇಕಾಗಿದೆ ಎಂದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್ ಮಾತನಾಡಿ, ಯಾವುದೇ ರೋಗವಿರಲಿ ಸೂಕ್ಷ್ಮ ಹಂತದಲ್ಲಿ ಪತ್ತೆ ಹಚ್ಚಿ, ಶೀಘ್ರ ಚಿಕಿತ್ಸೆ ನೀಡುವುದರಿಂದ ಸಂಪೂರ್ಣವಾಗಿ ರೋಗವನ್ನು ಹತೋಟಿಗೆ ತರಬಹುದು. ಪೌಷ್ಟಿಕ ಆಹಾರ ಸೇವಿಸಿ ರೋಗನಿರೋಧಕ ಶಕ್ತಿ ಹೆಚ್ಚಿಸಿಕೊಂಡು ರೋಗವನ್ನು ಹತೋಟಿಗೆ ತರಬಹುದು ಎಂದರು.

ನಗರದ ಜಿಲ್ಲಾ ಆಸ್ಪತ್ರೆಯಿಂದ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಅವರು ಕ್ಷಯರೋಗದ ಘೋಷಣೆ ಕೂಗಿಸುತ್ತಾ ರಂಗಯ್ಯನ ಬಾಗಿಲು, ಎಸ್‌ಬಿಎಂ ಬ್ಯಾಂಕ್ ಮುಂಭಾಗದಿಂದ ಪ್ರವಾಸಿ ಮಂದಿರದ ಮೂಲಕ ಜಾಥಾ ಕಾರ್ಯಕ್ರಮವೂ ಸಾಗಿ "ಕ್ಷಯ ಎಲ್ಲಿದ್ದರೂ ಅದು ಎಲ್ಲೆಡೆ ಇದ್ದಂತೆ" ಕ್ಷಯರೋಗಕ್ಕೆ ನಿಗದಿತವಾದ ಚಿಕಿತ್ಸೆ ಉಚಿತವಾಗಿ ಲಭ್ಯವಿದೆ" "ಟಿಬಿಯನ್ನು ಸೋಲಿಸಿ, ದೇಶವನ್ನ ಗೆಲ್ಲಿಸಿ" ಎಂಬಿತ್ಯಾದಿ ಘೋಷಣೆಗಳ ಮೂಲಕ ಸಾರ್ವಜನಿಕರಿಗೆ ಕ್ಷಯ ರೋಗದ ಕುರಿತು ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್, ಕೆಹೆಚ್‌ಪಿಟಿ ಜಿಲ್ಲಾ ಸಂಯೋಜಕಿ ವೀಣಾ, ಕ್ಷಯ ರೋಗ ನಿಯಂತ್ರಣ ಕಚೇರಿ ಸಿಬ್ಬಂದಿ ಎಸ್.ಟಿ ಎಲ್.ಎಸ್.ಮಾರುತಿ, ವಿಶ್ವನಾಥ, ಮಧುಸೂದನ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಮಾರುತಿ ಪ್ರಸಾದ್, ಗುರುಮೂರ್ತಿ, ಕಾಂತಪ್ಪ, ಪ್ರಭಾಕರ್ ಆರಾಧ್ಯ, ಹನುಮಂತರೆಡ್ಡಿ, ಯತೀಶ್, ಪೃಥ್ವಿ ಸೇರಿದಂತೆ ನರ್ಸಿಂಗ್ ವಿದ್ಯಾರ್ಥಿಗಳು ಇದ್ದರು.



## ವಾರ್ ರೂಂ, ಭದ್ರತಾ ಕೊಠಡಿ ಪರಿಶೀಲಿಸಿದ ಜಿಲ್ಲಾ ಚುನಾವಣಾಧಿಕಾರಿ; ಡಾ; ವೆಂಕಟೇಶ್

» **ದಾವಣಗೆರೆ**

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ನಾಮಪತ್ರ ಸಲ್ಲಿಕೆ ಏಪ್ರಿಲ್ 12 ರಿಂದ ಆರಂಭವಾಗಲಿದ್ದು ವಿಧಾನಸಭಾ ಕ್ಷೇತ್ರದಲ್ಲಿನ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಯಲ್ಲಿನ ವಾರ್ ರೂಂ ಪರಿಶೀಲನೆಯನ್ನು ಗುರುವಾರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ: ವೆಂಕಟೇಶ್ ಎಂ.ವಿ ನಡೆಸಿದರು.

ಮಾಯಕೊಂಡ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಯಲ್ಲಿನ ಸ್ಥಾಪಿಸಲಾದ ವಾರ್ ರೂಂ ಪರಿಶೀಲನೆ ನಡೆಸಲಾಯಿತು. ವಾರ್ ರೂಂನಲ್ಲಿ ಸಾರ್ವಜನಿಕರಿಗೆ ಸಹಾಯಕ್ಕಾಗಿ ಸ್ಥಾಪಿಸಲಾಗಿರುವ ಸಂಪರ್ಕ ವಿಧಾನ, ದೂರು ಸ್ವೀಕರಿಸಿ ನಿರ್ವಹಣೆ ಮಾಡುವ ವ್ಯವಸ್ಥೆ, ಮತಯಂತ್ರಗಳನ್ನು ಸಂಗ್ರಹಿಸಲು ವ್ಯವಸ್ಥೆ ಮಾಡಿಕೊಳ್ಳಲಾದ ಭದ್ರತಾ ಕೊಠಡಿ, ಗೈರು ಮತದಾರರ ಪಟ್ಟಿ ಸಿದ್ದಪಡಿಸುವ ಬಗ್ಗೆ ಪರಿಶೀಲನೆ ನಡೆಸಿದರು.

ಹೊನ್ನಾಳಿ ಭೇಟಿ; ಹೊನ್ನಾಳಿ ಸಹಾಯಕ ಚುನಾವಣಾಧಿಕಾರಗಳ ಕಚೇರಿಗೆ ಭೇಟಿ ನೀಡಿ ಅಲ್ಲಿ ಮತಯಂತ್ರಗಳನ್ನು ಸಂಗ್ರಹಿಸಲು ಸ್ಥಾಪಿಸಲಾದ ಸ್ಟ್ರಾಂಗ್ ರೂಂ ಪರಿಶೀಲನೆ ನಡೆಸಿದರು.

ಚೆಕ್‌ಪೋಸ್ಟ್ ಪರಿಶೀಲನೆ; ಹೊನ್ನಾಳಿ ತಾ; ಹೊಳೆಹರಳಹಳ್ಳಿ ಹಾಗೂ ಹರಿಹರ ತಾ; ನಂದಿಗುಡಿ ಚೆಕ್‌ಪೋಸ್ಟ್ ಪರಿಶೀಲನೆ ನಡೆಸಿ ಮಾರ್ಗದಲ್ಲಿ ಹೋಗುವ ಎಲ್ಲ ಮಾದರಿಯ ವಾಹನಗಳನ್ನು ಪರಿಶೀಲನೆ ಮಾಡಬೇಕು. ವಾಹನದಲ್ಲಿ ಸರಕು ಸಾಗಣೆ ಮಾಡುತ್ತಿದ್ದಲ್ಲಿ ನಿಯಮಾನುಸಾರ ಇನ್‌ವಾಯ್ಸ್ ಬಿಲ್, ಡೆಲಿವರಿನೋಟ್ ಎಲ್ಲಿಂದ ಎಲ್ಲಿಗೆ, ಯಾವ ಮಾದರಿ ವಸ್ತು ಎಂದು ತಿಳಿದುಕೊಂಡು ದಾಖಲು ಮಾಡಬೇಕೆಂದು ಸೂಚನೆ ನೀಡಿದರು.

ಈ ವೇಳೆ ಮಾಯಕೊಂಡ ಸಹಾಯಕ ಚುನಾವಣಾಧಿಕಾರಿ ದುರ್ಗಶ್ರೀ, ಹೊನ್ನಾಳಿ ಸಹಾಯಕ ಚುನಾವಣಾಧಿಕಾರಿ ಅಭಿಷೇಕ್ ಹಾಗೂ ತಹಶೀಲ್ದಾರರು ಉಪಸ್ಥಿತರಿದ್ದರು.




## ಆಹಾರ ಸುರಕ್ಷತೆ ಹಾಗೂ ಗುಣಮಟ್ಟದ ಕುರಿತು ಔಷಧ ವ್ಯಾಪಾರಸ್ಥರಿಗೆ ಕಾರ್ಯಾಗಾರ



» **ಚಿತ್ರದುರ್ಗ**

ಚಿತ್ರದುರ್ಗ ನಗರದ ಐಎಂಎ ಸಭಾಂಗಣದಲ್ಲಿ ಗುರುವಾರ ಔಷಧ ವ್ಯಾಪಾರಸ್ಥರಿಗೆ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಕಾಯ್ದೆ ಕುರಿತು ಮಾಹಿತಿ ನೀಡುವ ಕಾರ್ಯಗಾರ ನಡೆಯಿತು.

ಆಹಾರ ಸುರಕ್ಷತಾ ಅಂಕಿತ ಅಧಿಕಾರಿ ಡಾ.ಸಿ.ಎಲ್.ಫಾಲಕ್ಷ ಮಾತನಾಡಿ ಮೆಡಿಕಲ್ ಸ್ಟೋರ್‌ಗಳಲ್ಲಿ ಆಹಾರ ಪದಾರ್ಥಗಳಾದ ಪ್ರೋಟೀನ್ ಪೌಡರ್,ವಿಟಮಿನ್ ಮಾತ್ರೆ, ಬೋರ್ವಿಟಾ,ಬೂಸ್ಟ್‌ಗಳಂತಹ ಪದಾರ್ಥಗಳನ್ನು ಮಾರಾಟ ಮಾಡಲು ಕಡ್ಡಾಯವಾಗಿ ಕಾಯ್ದೆಯಡಿ ನೊಂದಣಿ, ಪರವಾನಿ ಪಡೆಯಬೇಕು ಎಂದರು.

ಕಾರ್ಯಗಾರದಲ್ಲಿ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಕಾಯ್ದೆ ಕುರಿತು ಕಿರು ಪರಿಚಯ ಮಾಡಿಕೊಟ್ಟು, ವ್ಯಾಪಾರಸ್ಥರ ಸಂದೇಹಗಳಿಗೆಉತ್ತರನೀಡಿದರು. ನೊಂದಣಿ ಮಾಡಿಸದೇ ಇದ್ದಲ್ಲಿ ಆಗಬಹುದಾದ ತೊಂದರೆ, ಕಾಯ್ದೆಯಡಿ ವಿಧಿಸಬಹುದಾದ ದಂಡ ಹಾಗೂ ಶಿಕ್ಷೆ ಬಗ್ಗೆ ತಿಳಿಸಿದರು. ಈ ಸಂದರ್ಭದಲ್ಲಿ ಆಹಾರ ಸುರಕ್ಷತಾಧಿಕಾರಿ ತಿರುಮಲೇಶ್, ಔಷಧ ನಿಯಂತ್ರಣ ಇಲಾಖೆಯ ಗೀತಾ, ಔಷಧ ವ್ಯಾಪಾರಸ್ಥರ ಸಂಘದ ಮಹಾಂತೇಶ್, ಔಷಧಿ ವ್ಯಾಪಾರಿ ಸಂಘದ ಟಿ.ಡಿ.ಧನಂಜಯ,ರೆಡ್ಡಿ ಸೇರಿದಂತೆ ಮತ್ತಿತರು ಇದ್ದರು.

## ಪ್ರಮುಖ ಸುದ್ದಿ

# ಚೆಕ್ ಪೋಸ್ಟ್ ಸಿಬ್ಬಂದಿಗಳಿಗೆ ಬೇಕು ಮೋಬೈಲ್ ಟಾಯ್ಲೆಟ್

» **ಮಹದೇವಪುರ ಶಿವಮೂರ್ತಿ.**

» **ನಮ್ಮಜನ ಸಮಚಾರ.**



ನಮ್ಮಜನ ವಿಶೇಷ

ಪರಶುರಾಂಪುರ: ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಈಗಾಗಲೇ ಜಿಲ್ಲೆಯ ವಿವಿಧೆಡೆ ಸ್ಥಾಪಿಸಿರುವ ಚೆಕ್ ಪೋಸ್ಟ್‌ಗಳಲ್ಲಿ ಸಿಬ್ಬಂದಿಗೆ ಶೌಚಾಲಯ ವ್ಯವಸ್ಥೆ ಇಲ್ಲದಂತಾಗಿ, ಅಲ್ಲಿಲ್ಲಿ ಹೋಗುವ ಪರಿಸ್ಥಿತಿ ನಿರ್ಮಾಣವಾಗುವುದರ ಜತೆ ಮುಜುಗರ ಪಡುವಂತಾಗಿದೆ.

ಚುನಾವಣೆ ನೀತಿ ಸಂಹಿತೆ ಜಾರಿಯಾಗಿರುವುದರಿಂದ ಅಕ್ರಮಗಳ ತಡೆಗೆ ಎಲ್ಲಾ ಚೆಕ್ ಪೋಸ್ಟ್ ಗಳಲ್ಲಿ ಸ್ಥಿರಾ ನಿಗಾವಣೆ ಘಟಕದಲ್ಲೂ ಪೊಲೀಸ್, ಕಂದಾಯ, ಗ್ರಾಮೀಣಾಭಿವೃದ್ಧಿ, ಶಿಕ್ಷಣ ಸೇರಿದಂತೆ ಇನ್ನಿತರ ಇಲಾಖೆಗಳ ಸಿಬ್ಬಂದಿ ಉಪಸ್ಥಿತರಿವವರು.ಈ ಇಲಾಖೆಗಳಲ್ಲಿ ಮಹಿಳಾ ಸಿಬ್ಬಂದಿಗಳು ಸಹಾ ಕರ್ತವ್ಯನಿರ್ವಹಿಸುವುದನ್ನ ಕಾಣಬಹುದಾಗಿದೆ.

ಇರುವ ಸಿಬ್ಬಂದಿಯಲ್ಲಿ ಒಬ್ಬರು ಶೌಚಾಲಯಕ್ಕೆ ತೆರಳಿದರೂ ಉಳಿದವುಳನ್ನ ಕೆಲಸ ನಿರ್ವಹಣೆ ಕಷ್ಟ.ಕೆಲಾ ಸಮಯ ವಿಡಿಯೋ ಚಿತ್ರೀಕರಣ ಹೋದಾಗ ಅಧಿಕಾರಿಗಳೇ ವಿಡಿಯೋ ಮಾಡೋ ಪರಿಸ್ಥಿತಿ ಎದುರಿಸುಸಿದರೇ ತಂಡದ ಮುಖ್ಯಸ್ಥರೇ ಹೋದಾಗ ಕೆಲಾ ಸಮಯ ತಪಾಸಣೆ ವಿಳಂಬವಾಗಿರುವುದನ್ನ ಕಾಣಬಹುದು.ಪುರುಷ ಸಿಬ್ಬಂದಿ ಆದರೆ ಬೈಕ್ ತೆಗೆದುಕೊಂಡು ಹೋಗಿಬರುವರು. ಮಹಿಳಾ ಸಿಬ್ಬಂದಿಯ ಪರಿಸ್ಥಿತಿ ಹೇಳತೀರದು.

**ಬಿಸಿಲಿಗೆ ಹೈರಾಣಾದ ಸಿಬ್ಬಂದಿ:** ಅಂತರ ಜಿಲ್ಲಾ ಹಾಗೂ ಅಂತರ್ ರಾಜ್ಯಗಳ ಗಡಿಗಳಲ್ಲಿ ಈಗಾಗಲೇ ತಾತ್ಕಾಲಿಕ ತಗಡಿನ ಶೆಡ್ ಗಳು ನಿರ್ಮಾಣವಾಗಿದೆ.ಆದರೆ ಇವುಗಳು ನೆರಳಿಗೆ ಮಾತ್ರ ಸೀಮಿತವಾಗಿದೆ. ಬೇಸಿಗೆ ಕಾಲ ಆದ್ದರಿಂದ ಮಧ್ಯಾಹ್ನ ವೇಳೆಗೆ ಬಿಸಿಲಿ ಧಗೆಗೆ ಅಲ್ಲಿ ಕುಳಿತುಕೋಳ್ಳುವುದು ಕಷ್ಟವಾಗಿ ಸಿಬ್ಬಂದಿ ಹೈರಾಣಾಗಿ ಆರೋಗ್ಯ ಸಮಸ್ಯೆ ಎದುರಿಸುತ್ತಿರುವ ಸಿಬ್ಬಂದಿಗಳನ್ನು ಕಾಣಬಹುದು . ಇದಕ್ಕೆ ಸಂಬಂಧ ಪಟ್ಟವರು ಫ್ಯಾನ್ ಇಲ್ಲವೆ ಏರ್ ಕೂಲರ್ ವ್ಯವಸ್ಥೆ ಮಾಡಿದರೆ ಅನುಕೂಲವಾಗುವುದು.

**ಮೊಬೈಲ್ ಟಾಯ್ಲೆಟ್ ವ್ಯವಸ್ಥೆ ಮಾಡಿದರೆ ಅನುಕೂಲ:** ಚೆಕ್ ಪೋಸ್ಟ್ ಗಳಲ್ಲಿ ಎಲ್ಲಾ ಇಲಾಖೆಗಳ ಪುರುಷ ಹಾಗೂ ಮಹಿಳಾ ಸಿಬ್ಬಂದಿಗಳು ಕತ9ವ್ಯ ನಿವ9ಹಿಸುತ್ತಿದ್ದಾರೆ. ಹಿರಿಯ ಅಧಿಕಾರಿಗಳು ಚೆಕ್ ಪೋಸ್ಟ್ ಗಳಿಗೆ ಆಗಾಗ ಭೇಟಿ ನೀಡುತ್ತಿರುವುದರಿಂದ ಅವರು ಸಹಾ ಶೌಚಾಲಯ ಸಮಸ್ಯೆ ಎದುರಿಸುತ್ತಿದ್ದಾರೆ. ಎಲ್ಲರಿಗೂ ಅನುಕೂಲಕ್ಕೆ ಸಿಬ್ಬಂದಿಗಳಿಗೆ ಮೊಬೈಲ್ ಟಾಯ್ಲೆಟ್ ವ್ಯವಸ್ಥೆ ಮಾಡುವಂತೆ ಹೆಸರೇಳಿಚ್ಚಸದ ಸಿಬ್ಬಂದಿಗಳು ಮಾಹಿತಿ ಕೇಳಿ ಬಂದಿದೆ.

**ಬಿಸಿಲಿನ ಧಗೆಗೆ ಆರೋಗ್ಯ ಸಮಸ್ಯೆ:** ಬಿಸಿಲಿನ ಏರಿಕೆ ಕಾಣುತ್ತಿರುವುದರಿಂದ ಚೆಕ್ ಪೋಸ್ಟ್ ಗಾಗಿ ನಿರ್ಮಿಸಿದ ತಗಡಿನ ಶೆಡ್ ಗಳಲ್ಲಿ ಹಗಲು ಸೇರಿ ರಾತ್ರಿಯು ಕುಳಿತುಕೋಳ್ಳಲು ಆಗುತ್ತಿಲ್ಲ.ಮರಗಿಡಗಳ ಕೆಳಗೆ ಕುಳಿತು ಕೆಲಸ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

> ಪುರುಷರು ಶೌಚ ಸಮಸ್ಯಕ್ಕೆ ದೂರ ಹೋಗಿ ಬರುತ್ತಾರೆ.ಮಹಿಳಾ ಸಿಬ್ಬಂಧಿಗಳು ಹೇಳೊ ಆಗಿಲ್ಲಾ,ಬಿಡೋ ಆಗಿಲ್ಲಾ,ಹತ್ತಿರದ ಮನೆ ಬಾಗಿಲಿಗೆ ಹೋಗಿ ಶೌಚಕ್ಕೆ ಸಮಸ್ಯೆ ಹೇಳಲು ಮುಜುಗರ ಜತೆ ಇಂತಹ ಕಷ್ಟದ ಪರಿಸ್ಥಿತಿ ಎದುರಿಸುವಂತಾಗಿದೆ.ಚೆಕ್ ಪೋಸ್ಟ್‌ಗಳಲ್ಲಿ ಮೊಬೈಲ್ ಟಾಯ್ಲೇಟ್ ಕಲ್ಪಿಸಿದರೆ ಅನುಕೂಲ.
>
> » **ಹೆಸರೇಳಿಚ್ಚಿಸದ ಚೆಕ್ ಪೋಸ್ಟ್ ಸಿಬ್ಬಂದಿಗಳು.**

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T